# ಹಂಪಿ ಟೈಮ್ಸ್
HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA






ಸಂಪುಟ:01 • ಸಂಚಿಕೆ:202 • ನೋಂದಣಿ ನಂ.:KARKAN27911 • ವಿಜಯನಗರ • 05.01.2024 • ಶುಕ್ರವಾರ • ಪುಟ:04 • ಬೆಲೆ:2

Volume:01 • Issue:202 • Reg.No:KARKAN27911 • VIJAYANAGARA • 05.01.2024 • Friday • Page:04 • Rs:2








# ಕನಿಷ್ಠ ಬೆಂಬಲ ಬೆಲೆಯಲ್ಲಿ ರಾಗಿ, ಬಿಳಿಜೋಳ ಖರೀದಿ ಆರಂಭ

## ಖರೀದಿ ಕೇಂದ್ರಗಳಲ್ಲಿ ರೈತರು ನೋಂದಾಯಿಸಿ : ಡಿಸಿ ಎಂ.ಎಸ್.ದಿವಾಕರ



- ಆರು ತಾಲ್ಲೂಕುಗಳಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.
- ಪ್ರತಿ ಕ್ವಿಂಟಲ್‌ಗೆ ರಾಗಿಗೆ 3846 ರೂ. , ಹೈಬ್ರಿಡ್ ಬಿಳಿಜೋಳಕ್ಕೆ 3180 ರೂ. ಹಾಗೂ ಮಾಲ್ದಂಡಿ ಬಿಳಿಜೋಳಕ್ಕೆ 3225 ರೂ. ಸರ್ಕಾರ ಬೆಲೆ ನಿಗದಿಪಡಿಸಿದೆ.

**■ ಹಂಪಿ ಟೈಮ್ಸ್ ಹೊಸಪೇಟೆ**

2023-24ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಮತ್ತು ಬಿಳಿಜೋಳ ಖರೀದಿ ಮಾಡಲಾಗುತ್ತಿದ್ದು, ಜಿಲ್ಲೆಯ ರೈತರು ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಕೃಷಿ ಮಾರಾಟ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಪೋಸ್ಟರ್ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಕನಿಷ್ಠ ಬೆಂಬಲ ಬೆಲೆಯಲ್ಲಿ ರೈತರಿಂದ ರಾಗಿ, ಬಿಳಿಜೋಳ ಖರೀದಿಸಲು ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಈಗಾಗಲೇ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದ್ದು, ಸರಕಾರವು ಆಯಾ ಬೆಳೆಗಳಿಗೆ ಪ್ರತಿ ಕ್ವಿಂಟಲ್ ರಂತೆ ಬೆಲೆ ನಿಗದಿಪಡಿಸಿದೆ. ಜಿಲ್ಲೆಯ ರೈತರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ನೋಂದಣೆ ಕುರಿತು ರೈತರಿಗೆ ಜಾಗೃತಿ ಮೂಡಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ಮಲ್ಲಿಕಾರ್ಜುನ ಅವರು ಮಾತನಾಡಿ, ಪ್ರಸಕ್ತ ಸಾಲಿನ ಕನಿಷ್ಠ ಬೆಂಬಲ ಬೆಲೆಯಡಿ ಪ್ರತಿ ಕ್ವಿಂಟಾಲ್ ರಾಗಿಗೆ 3846, ಹೈಬ್ರಿಡ್ ಬಿಳಿಜೋಳಕ್ಕೆ 3180 ಹಾಗೂ ಮಾಲ್ದಂಡಿ ಬಿಳಿಜೋಳಕ್ಕೆ 3225 ರೂ.ಗಳ ದರ ನಿಗದಿಪಡಿಸಿದ್ದು, ವಿಜಯನಗರ ಜಿಲ್ಲೆಗೆ ಖರೀದಿ ಏಜೆನ್ಸಿಯಾಗಿ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯನ್ನು ಸರ್ಕಾರವು ನೇಮಿಸಿದೆ. ಜಿಲ್ಲೆಯಲ್ಲಿ ಬೆಂಬಲ ಬೆಲೆಯಲ್ಲಿ ಜ.3ರವರೆಗೆ ಜಿಲ್ಲೆಯ 117 ರೈತರಿಂದ 2840 ಕ್ವಿಂಟಾಲ್ ಪ್ರಮಾಣದಷ್ಟು ನೋಂದಣಿಯಾಗಿದೆ. ನೋಂದಣಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ರಾಗಿ ಮತ್ತು ಬಿಳಿಜೋಳ ಬೆಳೆಗಾರರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಾಹಿತಿ ನೀಡಿದರು.

ಖರೀದಿ ಕೇಂದ್ರ, ಅಧಿಕಾರಿಗಳ ವಿವರ: ಖರೀದಿ ಕೇಂದ್ರಗಳನ್ನು ಆಯಾ ತಾಲ್ಲೂಕಿನ ಎ.ಪಿ.ಎಂ.ಸಿ ಯಾರ್ಡ್‌ಗಳಲ್ಲಿ ಪ್ರಾರಂಭಿಸಲಾಗಿದ್ದು, ರೈತರು ನೋಂದಣಿಗಾಗಿ ಖರೀದಿ ಕೇಂದ್ರಗಳ ಅಧಿಕಾರಿಗಳಾದ ಹೊಸಪೇಟೆಯ ಆನಂದ್ ಎರಗುಲ್ ಮೊ.ಸಂ: 7019544230, ಹರಪ್ಪನಹಳ್ಳಿಯ ಪರಶುರಾಮ್ ಕುಲಕಾರ್ ಮೊ.ಸಂ: 9972403676, ಹಗರಿಬೊಮ್ಮನಹಳ್ಳಿಯ ಯು.ವಿ ಅಥಣಿಮಠ್ ಮೊ.ಸಂ: 9740827093, ಹಡಗಲಿಯ ಮಂಜುನಾಥ್ ಒಡ್ಡರ್ ಮೊ.ಸಂ: 9845274145, ಕೂಡ್ಲಿಗಿಯ ರಾಜು ತಿಪ್ಪಶೆಟ್ಟಿ ಮೊ.ಸಂ: 8073814583 ಹಾಗೂ ಕೊಟ್ಟೂರಿನ ಚಿದಾನಂದ ನವಲಗುಂದ ಮೊ.ಸಂ: 9480752045ಗೆ ಸಂಪರ್ಕಿಸಬಹುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಕೃಷಿ ಮಾರಾಟ ಮಂಡಳಿಯ ಜಿಲ್ಲಾ ವ್ಯವಸ್ಥಾಕ ಸಂಗಮೇಶ ಸೇರಿದಂತೆ ಖರೀದಿ ಕೇಂದ್ರಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನ್ನಡ ವಿವಿ ಸಂಶೋಧನಾರ್ಥಿಗಳ ಬಾಕಿ 12 ತಿಂಗಳ ಫೆಲೋಶಿಪ್ ನೀಡಿ



**■ ಹಂಪಿ ಟೈಮ್ಸ್ ಹೊಸಪೇಟೆ**

ಕನ್ನಡ ವಿಶ್ವವಿದ್ಯಾಲಯದಲ್ಲಿ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಂಶೋಧನ ವಿದ್ಯಾರ್ಥಿಗಳು ಕಳೆದ 12 ತಿಂಗಳಿನಿಂದ ಬಾಕಿ ಉಳಿಸಿಕೊಂಡಿರುವ ಫೆಲೋಶಿಪ್‌ನ್ನು ತಕ್ಷಣವೇ ಬಿಡುಗಡೆಗೊಳಿಸಬೇಕೆಂದು ಒತ್ತಾಯಿಸಿ ಗುರುವಾರ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗೆ ಮನವಿ ಸಲ್ಲಿಸಿದರು.

ಸಂಶೋಧನೆಗಾಗಿ ವಿದ್ಯಾರ್ಥಿಗಳಿಗೆ ಕೊಡುತ್ತಿರುವ ಮಾಸಿಕ ಆರ್ಥಿಕ ನೆರವು 10,000 ರೂ. ಗಳನ್ನು ಒಂದು ವರ್ಷದಿಂದ ಬಾಕಿ ಉಳಿಸಿಕೊಂಡಿದ್ದು. ಇದರಿಂದ ಸಂಶೋಧನೆಯನ್ನು ಕೈಗೊಳ್ಳಲು ತುಂಬಾ ಕಷ್ಟವಾಗಿದೆ. ಹೀಗಾಗಲೇ ಆಡಳಿತಕ್ಕೆ ಅನೇಕ ಬಾರಿ ಮನವಿಯನ್ನು ಸಲ್ಲಿಸಿದರು ಸಹ ಯಾವುದೇ ಪ್ರಯೋಜನವಾಗಿಲ್ಲ. ಆಡಳಿತವು ಅನುದಾನ ಕೊರತೆಯನ್ನು ಮುಂದಿಟ್ಟು ನಮ್ಮ ಬೇಡಿಕೆಯನ್ನು ಹಿಂದೆ ಸರಿಸುತ್ತಿದೆ. ಇದರಿಂದ ಬಡ ಕುಟುಂಬದಿಂದ ಬಂದಿರುವ ಸಂಶೋಧಕರ ಅಧ್ಯಯನ ಮೇಲೆ ಇದರ ಪರಿಣಾಮ ಬೀರುತ್ತಿದೆ. ವಿಶ್ವವಿದ್ಯಾಲಯದ ಆಡಳಿತ ಹಾಗೂ ಸರ್ಕಾರಕ್ಕೆ 12 ತಿಂಗಳ ಬಾಕಿ ಉಳಿದಿರುವ ಫೆಲೋಶಿಪ್‌ನ್ನು ಕೂಡಲೇ ಬಿಡುಗಡೆ. ಐದು ವರ್ಷಗಳ ಬಾಕಿರುವ ಸಾದಿಲ್ವಾರು ವೆಚ್ಚ ಹಾಗೂ ಬೈಂಡಿಂಗ್ ವೆಚ್ಚ ನೀಡಬೇಕು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಬೇಕು ಎಂದು ಸಂಶೋಧನಾರ್ಥಿಗಳು ಒತ್ತಾಯಿಸಿದರು. ವಿದ್ಯಾರ್ಥಿಗಳ ಬೇಡಿಕೆ ತಕ್ಷಣ ಈಡೇರದಿದ್ದರೆ ಪ್ರತಿಭಟನೆಗೆ ಮುಂದಾಗಲಾಗುವುದು ಎಂದು ಮನವಿ ಮೂಲಕ ಎಚ್ಚರಿಸಿದರು. ಈ ಸಂಧರ್ಭದಲ್ಲಿ ಸಂಶೋಧನಾರ್ಥಿಗಳಾದ ಲಕ್ಷ್ಮಣ್ ದೊಡ್ಡಬಸವರಾಜ, ವೀರೇಶ್, ಮಹೇಶ್ ಕೆ.ಎಚ್, ಮಣಿಕಂಠ, ನರಸಿಂಹರಾಜು, ಯು.ಬಸವರಾಜ, ಹನುಮಂತ, ರವಿಕುಮಾರ್ ಜಾಧವ್, ಮಂಜುನಾಥ, ಅಶೋಕ, ನಾಗೇಶ್, ಸಿದ್ದಪ್ಪ, ವಿಷ್ಣು, ಸಂದೀಪ್ ಡಿ. ಡಿ. ಪ್ರದೀಪ್, ಮೋಹನ್ ಇನ್ನೂ ಮುಂತಾದವರು ಭಾಗವಹಿಸಿದ್ದರು.

## ಮೈಕ್ರೋ ನ್ಯೂಸ್

# ಸುಧಾಕರ ಲಕ್ಕವಳ್ಳಿಗೆ ಲಂಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಗರಿ

**ಹಂಪಿ ಟೈಮ್ಸ್ ಹೊಸಪೇಟೆ:**

ಶ್ರೀ ತರಳಬಾಳು ಜಗದ್ಗುರು ವಿದ್ಯಾ ಸಂಸ್ಥೆ(ರಿ,.) ಸಿರಿಗೆರೆಯ ದೈಹಿಕ ಶಿಕ್ಷಣ ಶಿಕ್ಷಕ ಡಾ.ಸುಧಾಕರ.ಜಿ.ಲಕ್ಕವಳ್ಳಿ ಇವರಿಗೆ ಲಂಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್



ಸಂಸ್ಥೆ-ಲಂಡನ್ ಇದರ ಭಾರತೀಯ(ದೆಹಲಿ) ಯ ಉಪ ವಿಭಾಗವು ಸುಧಾಕರ್ ರವರು 2017 ರಿಂದ 2023 ರ ವರೆವಿಗೆ ದೈಹಿಕ ಶಿಕ್ಷಣ ಸಾಹಿತ್ಯ ಕ್ಷೇತ್ರಕ್ಕೆ ನೀಡಿರುವ ಕೊಡುಗೆ ಪರಿಗಣಿಸಿ ಲಂಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್-2024 ದಾಖಲೆ ಪ್ರಮಾಣ ಪತ್ರ ನೀಡಿ ಗೌರವಿಸಿದೆ.

ಪುಸ್ತಕಗಳು, ಪತ್ಯಗಳು ಐ, ಎಸ್, ಬಿ, ಎನ್ ಸಂಖ್ಯೆಯೊಂದಿಗೆ, ಸಂಶೋಧನಾ ಲೇಖನಗಳು ಐ, ಎಸ್, ಎಸ್, ಎನ್ ಸಂಖ್ಯೆಗಳೊಂದಿಗೆ ಅಂತರಾಷ್ಟ್ರೀಯ ಪ್ರಕಾಶನಗಳಲ್ಲಿನ ಪ್ರಕಟಣೆ ಹಾಗೂ ರಾಜ್ಯ, ವಿವಿಧ ಪ್ರಾದೇಶಿಕ ಪತ್ರಿಕೆಗಳಲ್ಲಿ ಆರೋಗ್ಯಮುಖಿ ಲೇಖನ ಮತ್ತು ಅಂಕಣಗಳು ಹಾಗೂ ಇವರೆಗೂ ಇವರು ನೀಡಿರುವ ವಿಶೇಷ ಉಪನ್ಯಾಸಗಳು, ಪತ್ರಿಕಾ ಮಂಡನೆಗಳು, ಈಗಾಗಲೇ ಇವರು ಹೊಂದಿರುವ ವೈಯಕ್ತಿಕ ಅಂತರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯಮಟ್ಟದ ದಾಖಲೆಗಳು, ವಿವಿಧ ರಾಜ್ಯಗಳ ಸಂಘ ಸಂಸ್ಥೆಗಳು ನೀಡಿರುವ ಪ್ರಶಸ್ತಿ ಮತ್ತು ಪುರಸ್ಕಾರಗಳನ್ನು ಪರಿಶೀಲಿಸಿ ದೈಹಿಕ ಶಿಕ್ಷಣ ಕ್ಷೇತ್ರದಲ್ಲಿನ ವಯಕ್ತಿಕ ಸಾಧನೆಗೆ ಲಭಿಸಿದ ಹಿರಿಮೆಯ ಗರಿಯಾಗಿದೆ.

ಡಾ.ಸುಧಾಕರ ಜಿ.ಲಕ್ಕವಳ್ಳಿ ಅವರು ಜನ್ಮ ನೀಡಿದ ತಂದೆ, ತಾಯಿ, ಬೆಳವಣಿಗೆಗೆ ಸಹಕಾರಿಯಾದ ಸ್ನೇಹಿತರು, ವಿದ್ಯೆ ನೀಡಿದ ಶಿಕ್ಷಕರು, ಉದ್ಯೋಗ ನೀಡಿದ ಶ್ರೀ ತರಳಬಾಳು ಜಗದ್ಗುರು ವಿದ್ಯಾ ಸಂಸ್ಥೆಯ ಪರಮ ಪೂಜ್ಯರು, ಬೆನ್ನೆಲುಬಾಗಿನಿಂತ ಪತ್ರಿಕ ಮಾಧ್ಯಮದವರಿಗೆ ಈ ಸಾಧನೆಯ ಗರಿ ಅರ್ಪಿಸಿರುತ್ತಾರೆ.

# ಮಿನಿ ಉದ್ಯೋಗ ಮೇಳ

## ಬಳ್ಳಾರಿಯಲ್ಲಿ ಜ.05, 06 ರಂದು ಸಂದರ್ಶನ

**■ ಹಂಪಿ ಟೈಮ್ಸ್ ಬಳ್ಳಾರಿ**


ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಎರಡು ದಿನಗಳ "ಮಿನಿ ಉದ್ಯೋಗಮೇಳ"ವನ್ನು ಜ.05 ಮತ್ತು 06 ರಂದು ಬೆಳಿಗ್ಗೆ 10 ಗಂಟೆಯಿಂದ ಹಳೆಯ ತಹಶೀಲ್ದಾರರ ಕಚೇರಿ ಆವರಣದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಆವರಣದಲ್ಲಿ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪಿ.ಎಸ್.ಹಟ್ಟಪ್ಪ ಅವರು ತಿಳಿಸಿದ್ದಾರೆ.

ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳಾದ ಅಮೆಜಾನ್ ಲಿಮಿಟೆಡ್ ಹಾಗು ವಿಸ್ಟ್ರಾನ್ ಇನ್ಫೋಕಂ ಕಂಪನಿಗಳು ಭಾಗವಹಿಸುತ್ತಿದ್ದು, ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಡಿಪ್ಲೋಮಾ ಮತ್ತು ಪದವಿ ಮುಗಿಸಿದ ಆಸಕ್ತ ಅಭ್ಯರ್ಥಿಗಳು ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ ವಿವರಗಳೊಂದಿಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ರೀತಿಯ ಶುಲ್ಕವಿರುವುದಿಲ್ಲ. ಜಿಲ್ಲೆಯ ನಿರುದ್ಯೋಗಿ ಯುವಕರು ಉದ್ಯೋಗ ಮೇಳವನ್ನು ಸದುಪಯೋಗ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ದೂ:08392-273988, 08392-294230 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪಿ.ಎಸ್.ಹಟ್ಟಪ್ಪ ಅವರು ತಿಳಿಸಿದ್ದಾರೆ.





ದೆಹಲಿಯ ವಿಮಾನ ನಿಲ್ದಾಣದಲ್ಲಿ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿನ್ ತೆಂಡೂಲ್ಕರ್ ಅವರನ್ನು ಆಕಸ್ಮಿಕವಾಗಿ ಭೇಟಿಯಾಗಿ ಕುಶಲೋಪಹರಿ ವಿಚಾರಿಸಿದ ಕ್ಷಣ

# ಮಾದಕ ದ್ರವ್ಯ ವಿರೋಧಿ ದಿನಾಚರಣೆ : ವಾಕ್ ಮ್ಯಾರಾಥಾನ್

**■ ಹಂಪಿ ಟೈಮ್ಸ್ ಹೊಸಪೇಟೆ**

ನಗರದಲ್ಲಿ ಮಾದಕ ದ್ರವ್ಯ ವಿರೋಧಿ ದಿನಾಚರಣೆ ನಿಮಿತ್ತ ಗುರುವಾರ ಹಮ್ಮಿಕೊಂಡಿದ್ದ ವಾಕ್ ಮ್ಯಾರಾಥಾನ್‌ಗೆ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಮತ್ತು ಎಸ್ಪಿ ಶ್ರೀಹರಿಬಾಬು ಚಾಲನೆ ನೀಡಿದರು.

ಮಾದಕ ದ್ರವ್ಯ ಬಳಕೆ ಆರೋಗ್ಯಕ್ಕೆ ಹಾನಿಯಾಗಿದ್ದು ವಿದ್ಯಾರ್ಥಿಗಳು ಹಾಗೂ ಯುವಸಮೂಹ ಎಚ್ಚೆತ್ತುಕೊಳ್ಳಬೇಕು. ಮಾದಕ ದ್ರವ್ಯ ಜೀವನದ ಆನಂದವನ್ನೆ ಕಸಿದುಕೊಳ್ಳುತ್ತದೆ. ಉನ್ನತ ಗುರಿಸಾಧನೆಗೆ ಅಡ್ಡಿಯಾಗುತ್ತದೆ. ಜೀವನದಲ್ಲಿ ಉನ್ನತ ಸ್ಥಾನಮಾನಗಳನ್ನು ಪಡೆಯಬೇಕೆಂದು ಗುರಿ ಇಟ್ಟುಕೊಳ್ಳಬೇಕು. ಸನ್ಮಾರ್ಗದಲ್ಲಿ ಬದುಕವವರನ್ನು ಆದರ್ಶವಾಗಿಟ್ಟುಕೊಂಡು ಬೆಳೆಯಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಹೇಳಿದರು.

ಜಾಗೃತ ಜಾಥಾದಲ್ಲಿ ಸಾವಿರಾರು ಕಾಲೇಜು ವಿದ್ಯಾರ್ಥಿಗಳು, ಪೊಲೀಸರು ಭಾಗವಹಿಸಿದ್ದರು.




ಡಾ.ಪುನೀತ್ ರಾಜ್ ಕುಮಾರ್ ವೃತ್ತದಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ ಜಾಗೃತಿ ಮೂಡಿಸಲಾಯಿತು. ಮಾದಕವಸ್ತುಗಳ ವಿರುದ್ಧ ಜಾಗೃತಿಯ ಬೋರ್ಡ್ ಹಿಡಿದು ಸಾಗಿದ ಸಾವಿರಾರು ವಿದ್ಯಾರ್ಥಿಗಳು, ಪೊಲೀಸರು ಸಾಗಿದರು. ವಿಜಯನಗರ ಎಎಸ್ಪಿ ಸಲಿಂಪಾಷಾ, ಆರ್‌ಟಿಓ ವಸಂತ್ ಚೌವ್ಹಾಣ್, ಡಿವೈಎಸ್ಪಿ ಮಂಜುನಾಥ್ ತಳವಾರ್, ಪಿಐಗಳಾದ ಬಾಲನಗೌಡ, ವಿಶ್ವನಾಥ್ ಹಿರೇಗೌಡರ್, ಶ್ರೀನಿವಾಸ್ ಮೇಟಿ, ದೀಪಕ್ ಬೂಸರೆಡ್ಡಿ, ಸೇರಿದಂತೆ ಇತರರು ಇದ್ದರು.

# ಬಿಡಾಡಿ ದನಗಳನ್ನು ಮಾಲೀಕರು ಮನೆಯಲ್ಲಿ ಕಟ್ಟಿಕೊಳ್ಳಿ: ಇಲ್ಲದಿದ್ದರೆ ಕ್ರಮ

**■ ಹಂಪಿ ಟೈಮ್ಸ್ ಕಂಪ್ಲಿ**



ಕಂಪ್ಲಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬಿಡಾಡಿ ದನಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರ ಪ್ರಾಣ ಹಾನಿ ಹಿನ್ನಲೆಯಲ್ಲಿ ಬಿಡಾಡಿ ದನಗಳ ಮಾಲೀಕರು ತಮ್ಮ ತಮ್ಮ ದನಕರಗಳನ್ನು ಪ್ರಕಟಣೆಗೊಂಡ 03 ದಿನದೊಳಗಾಗಿ ತಮ್ಮ ಮನೆಯಲ್ಲಿಯೇ ಕಟ್ಟಿಹಾಕಿಕೊಳ್ಳಬೇಕು. ಇಲ್ಲದಿದ್ದಲ್ಲಿ ಬೀದಿ ದನಗಳನ್ನು ಹಿಡಿದು ಗೋಶಾಲೆಗಳಿಗೆ ಸಾಗಿಸಲು ಕ್ರಮ ವಹಿಸಲಾಗುವುದು ಮತ್ತು ದನಕರುಗಳನ್ನು ಹಿಡಿಯುವವರು ಯಾರಾದರೂ ಇದ್ದಲ್ಲಿ ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಕಂಪ್ಲಿ ಪುರಸಭೆ ಮುಖ್ಯಾಧಿಕಾರಿ ಕೆ.ದುರುಗಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಳ ಪುಟಗಳಲ್ಲಿ


**ರೂಪಕ ಸಾಮ್ರಾಜ್ಯ ಚಕ್ರವರ್ತಿ ಕುಮಾರವ್ಯಾಸ**
– ವೀಣಾ ಹೇಮಂತಗೌಡ ಪಾಟೀಲ್
ಪುಟ 2 ರಲ್ಲಿ ಓದಿ

**ಗೋರಿ ಧ್ವಂಸ ಪ್ರಕರಣ ರೀ ಓಪನ್- ಸುಳ್ಳು ಸಂಗತಿ : ಸಿಎಂ ಸಿದ್ದರಾಮಯ್ಯ**
ಪುಟ 2 ರಲ್ಲಿ ಓದಿ

## ವಚನ ಅರಿವು

### ದಿವ್ಯಜ್ಞಾನ

**ವೇದವ ಕಲಿತಲ್ಲಿ, ಪಾತಕನಲ್ಲದೆ ಜ್ಞಾನಿಯಲ್ಲ, ನಿಲ್ಲು.**
**ಶಾಸ್ತ್ರ ಪುರಾಣವನೋದಿದಲ್ಲಿ, ಪಂಡಿತನಲ್ಲದೆ ಜ್ಞಾನಿಯಲ್ಲ, ನಿಲ್ಲು.**
**ವ್ರತ ನೇಮ ಕೃತ್ಯ ಪೂಜಕನಾದಡೇನು? ದಿವ್ಯಜ್ಞಾನದ ಠಾವನರಿಯಬೇಕು.**
**ಈ ಭೇದಂಗಳ ತಿಳಿದರಿದಲ್ಲಿ, ಮನಸಂದಿತ್ತು ಮಾರೇಶ್ವರಾ.**
**– ಮನಸಂದ ಮಾರಿತಂದೆ**

ಮನಸಂದ ಮಾರಿತಂದೆಯ ಈ ವಚನ ವಿದ್ಯೆ ಕಲಿತ ವಿದ್ಯಾವಂತನಿಗೂ, ಜ್ಞಾನಿಗೂ ಇರುವ ವ್ಯತ್ಯಾಸವನ್ನು ಹೇಳುತ್ತದೆ. ನಾವು ಅಕ್ಷರ ಬಲ್ಲವರನ್ನು ಜ್ಞಾನಿಗಳೆಂದು ತಿಳಿದುಕೊಂಡಿರುತ್ತೇವೆ. ಅಕ್ಷರ ಬಲ್ಲವರು ತಮ್ಮನ್ನು ತಾವು ಮಹಾಜ್ಞಾನಿಗಳೆಂದು ತಿಳಿದುಕೊಂಡಿರುತ್ತಾರೆ, ನಂಬಿಸಿರುತ್ತಾರೆ. ಇಂತಹವರು ಅಕ್ಷರ ಬಂಡವಾಳ ಮಾಡಿಕೊಂಡು ಸಮಾಜದ ದಾರಿ ತಪ್ಪಿಸಿ ಹೊಟ್ಟೆ ಬದುಕುತ್ತಿರುತ್ತಾರೆ. ವೇದವನ್ನು ಕಲಿತವನು ಅದರ ಅಭ್ಯಾಸಿಯಾಗಿರುತ್ತಾನೆ. ವೇದದ ಶ್ಲೋಕಗಳನ್ನು ಮಾತು ಮಾತಿಗೆ ಹೇಳಬಲ್ಲ, ಅದನ್ನು ಬೋಧಿಸಬಲ್ಲವನೂ ಆಗಿರುತ್ತಾನೆ. ಆದರೆ ಅವನು ಜ್ಞಾನಿಯಲ್ಲ. ಶಾಸ್ತ್ರ, ಪುರಾಣಗಳನ್ನು ಓದಿ, ತಿಳಿದು ದೊಡ್ಡ ಮಾತುಗಾರ, ಪಂಡಿತ, ಶಾಸ್ತ್ರಿ ಅನ್ನಿಸಿಕೊಳ್ಳಬಹುದೆ ಹೊರತು ಜ್ಞಾನಿಯಾಗಲಾರ. ದೇವತೆಗಳನ್ನು ಒಲಿಸಿಕೊಳ್ಳುವೆ ಎಂದು ಹಲವಾರು ವ್ರತ, ನೇಮಾಚಾರ, ಪೂಜೆ, ಪುನಸ್ಕಾರಗಳನ್ನು ಮಾಡುವವನು ಪೂಜಾರಿಯಾಗುತ್ತಾನೆ ಜ್ಞಾನವನ್ನು ಅರಿತಿರಲಾರ. ಕಲಿತವರು ಅರಿವು ಪಡೆಯುವುದನ್ನು ಕಲಿಯಬೇಕಿತ್ತು ಅದನ್ನು ಕಲಿಯದೆ ಹೋದರು. ಅರಿವು ಹೊರಗೆ ಇರುವುದಲ್ಲ ತನ್ನೊಳಗೆ ಇರುತ್ತದೆ. ಅದನ್ನು ಕಂಡುಕೊಂಡಾಗ ಕಲಿತ ಅಕ್ಷರಕ್ಕೆ ಮೌಲ್ಯ ಬರುತ್ತದೆ. ಅರಿವಿನ ಆಚಾರದಿಂದ ಮಾಸಿದ ದಿವ್ಯಜ್ಞಾನ ಬೆಳಗುತ್ತದೆ.

(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)

## ಗೋರಿ ಧ್ವಂಸ ಪ್ರಕರಣವನ್ನು ರೀ ಓಪನ್- ಸುಳ್ಳು ಸಂಗತಿ : ಸಿಎಂ ಸಿದ್ದರಾಮಯ್ಯ

■ ಹಂಪಿ ಟೈಮ್ಸ್ ಬೆಂಗಳೂರು:
ಕೆಲವು ದೃಶ್ಯ ಮಾಧ್ಯಮಗಳಲ್ಲಿ ಬಾಬಾಬುಡನ್ ಗಿರಿಯಲ್ಲಿ ಗೋರಿ ಧ್ವಂಸ ಪ್ರಕರಣವನ್ನು ರೀ ಓಪನ್ ಮಾಡಲಾಗಿದೆ ಎನ್ನುವ ಸುದ್ದಿ ಪ್ರಸಾರವಾಗುತ್ತಿದ್ದು ಇದು ಅಪ್ಪಟ ತಪ್ಪು ಮಾಹಿತಿ ಹಾಗೂ ಸುಳ್ಳಿನಿಂದ ಕೂಡಿದ್ದಾಗಿದೆ.



2017 ರಲ್ಲಿ ದಾಖಲಾಗಿದ್ದ ಪ್ರಕರಣದ ಸಹಜ ಕಾನೂನು ಪ್ರಕ್ರಿಯೆಯ ಭಾಗವಾಗಿ ಆರೋಪಿಗಳಿಗೆ ನ್ಯಾಯಾಲಯದ ಸಮನ್ಸ್ ಜಾರಿ ಆಗಿದೆ ಅಷ್ಟೆ.

2017 ರಲ್ಲಿ ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ 2020 ರ ಮಾರ್ಚ್ 19 ರಂದು ವಿಚಾರಣೆಗೆ ಅನುಮತಿಗಾಗಿ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಅದರ ಆಧಾರದಲ್ಲಿ 2023 ರ ಸೆಪ್ಟೆಂಬರ್ 7 ರಂದು ಸರ್ಕಾರ ಅನುಮತಿ ನೀಡಿತ್ತು. 2023 ರ ಅಕ್ಟೋಬರ್ 24 ರಂದು ಆರೋಪಿಗಳ ವಿರುದ್ಧ ಆರೋಪಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿತ್ತು. ಬಳಿಕ ಈ ಕಾನೂನು ಪ್ರಕ್ರಿಯೆಯ ಮುಂದುವರೆದ ಭಾಗವಾಗಿ ನ್ಯಾಯಾಲಯದಿಂದ ಸಮನ್ಸ್ ಜಾರಿಯಾಗಿದ್ದು ಜನವರಿ 8 ರಂದು ನ್ಯಾಯಾಲಯಕ್ಕೆ ಹಾಜರಾಗುವಂತೆ ನ್ಯಾಯಾಲಯದಿಂದಲೇ ಸಮನ್ಸ್ ಜಾರಿಯಾಗಿದೆ. ಇದಿಷ್ಟೂ ಕೂಡ ಯಾವುದೇ ಒಂದು ಪ್ರಕರಣದಲ್ಲಿ ಸಹನವಾಗಿ ನಡೆಯುವ ಕಾನೂನು ಪ್ರಕ್ರಿಯೆಯಾಗಿದೆ. ಆದ್ದರಿಂದ ಪ್ರಕರಣದ ಮರು ತನಿಖೆಗೆ ಸರ್ಕಾರ ಮುಂದಾಗಿದೆ ಎನ್ನುವುದು ತಪ್ಪು ಮತ್ತು ದುರುದ್ದೇಶಪೂರಿತ ಸುಳ್ಳು ಸಂಗತಿಯಾಗಿದೆ.

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ-ಮೇಲ್:hampitimes@gmail.com
M: 9448633038

# ರೂಪಕ ಸಾಮ್ರಾಜ್ಯ ಚಕ್ರವರ್ತಿ ಕುಮಾರವ್ಯಾಸ

ವಿಷ್ಣು ಭಕ್ತ ನಾರಾಯಣಪ್ಪನಿಗೆ ಸ್ವತಹ ವೀರನಾರಾಯಣ ದೇವರು ಕನಸಿನಲ್ಲಿ ಪ್ರತ್ಯಕ್ಷವಾಗಿ ನೀನು ಪ್ರತಿದಿನ ಮುಂಜಾನೆ ದೇವಸ್ಥಾನದ ಬಾವಿಯಲ್ಲಿ ಮುಳುಗು ಹಾಕಿ ಆ ಒದ್ದೆ ಬಟ್ಟೆಯಲ್ಲಿಯೇ ದೇಗುಲದ ಕಂಬದ ಬಳಿ ಕುಳಿತು ನಾನು ಹೇಳುವ ಮಹಾಭಾರತವನ್ನು ಪುನರ್ ರಚಿಸಬೇಕು ಎಂದು ಹೇಳಿದನು. ಆದರೆ ಯಾವತ್ತೂ ನನ್ನನ್ನು ಹುಡುಕುವ ಪ್ರಯತ್ನ ಮಾಡಬಾರದು ಕೇವಲ ನನ್ನ ಧ್ವನಿಯನ್ನು ಕೇಳುತ್ತಾ ನೀನು ಕಾವ್ಯ ರಚನೆ ಮಾಡಬೇಕು ಎಂದು ಷರತ್ತು ವಿಧಿಸಿದನು. ಅಕಸ್ಮಾತ್ ನೀನು ಹಾಗೆ ಮಾಡದೆ ನನ್ನನ್ನು ಹುಡುಕುವ ಪ್ರಯತ್ನ ಮಾಡಿದರೆ ಮುಂದೆ ನಿನಗೆ ನಾನು ಅಥವಾ ನನ್ನ ಧ್ವನಿ ಕೇಳ ಸಿಗುವುದಿಲ್ಲ ಎಂದು ಎಚ್ಚರಿಕೆ ಕೂಡ ನೀಡಿದನು. ದೇವರ ಮಾತಿನಂತೆ ಪ್ರತಿದಿನವೂ ನಾರಾಯಣಪ್ಪ ಬಾವಿಯಲ್ಲಿ ಮುಳುಗು ಹಾಕಿ ಅದೇ ಒದ್ದೆ ಬಟ್ಟೆಯಲ್ಲಿಯೇ ದೇಗುಲದ ಕಂಬದ ಬಳಿ ಕುಳಿತು, ದೇಗುಲದ ವಿಗ್ರಹದ ಹಿಂದಿನಿಂದ ಕೇಳಿ ಬರುವ ಧ್ವನಿಯನ್ನು ಆಲಿಸುತ್ತಾ ಮಹಾಭಾರತವನ್ನು ಬರೆಯಲಾರಂಭಿಸಿದ. ಒಂದೊಂದೇ ಪರ್ವಗಳು ಮುಗಿಯುತ್ತಾ ಸುಮಾರು ಹತ್ತು ಪರ್ವಗಳ ಬರವಣಿಗೆ ಮುಗಿಯುತ್ತಾ ಬಂದಿತ್ತು. ಜೊತೆಗೆ ನಾರಾಯಣಪ್ಪನ ಕುತೂಹಲವು ಹೆಚ್ಚುತ್ತಾ ಹೋಗಿ ಒಂದು ದಿನ ನಿಧಾನವಾಗಿ ದೇಗುಲದ ಮೂರ್ತಿಯ ಹಿಂಭಾಗಕ್ಕೆ ಇಣುಕಿ ನೋಡಿದ. ತಕ್ಷಣವೇ ದೇವರ ಮೂರ್ತಿಯ ಹಿಂದೆ ಬರುತ್ತಿದ್ದ ಧ್ವನಿ ನಿಂತು ಹೋಯಿತು. ಅದೇ ಕೊನೆ ಮುಂದೆಂದು ಆ ಧ್ವನಿ, ಆ ದೈವ ಕಾಣಿಸಲೇ ಇಲ್ಲ.... ಆಗ ಕವಿಗೆ ಅರಿವಾದದ್ದು ತನ್ನಿಂದ ವ್ಯಾಸ ಭಾರತವನ್ನು ಬರೆಸುತ್ತಿದ್ದುದು ಸಾಕ್ಷಾತ್ ವೀರನಾರಾಯಣ ದೇವರು ಎಂದು.ಇದು ಕುಮಾರವ್ಯಾಸ ಎಂದು ಕನ್ನಡ ಸಾಹಿತ್ಯ ಲೋಕದಲ್ಲಿ ಪ್ರಸಿದ್ಧನಾದ ಗದುಗಿನ ನಾರಾಯಣಪ್ಪನ ಕಥೆ. ಇಂದಿಗೂ ಕೂಡ ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿ ಕುಮಾರವ್ಯಾಸನ ಕಂಬವಿದೆ ಬಾವಿಯಿದೆ ದೇಗುಲದಲ್ಲಿ ದೇವರ ವಿಗ್ರಹವಿದೆ.

ಹುಬ್ಬಳ್ಳಿ ಹತ್ತಿರದ ಕುಂದಗೋಳ ತಾಲೂಕಿನ ಕೋಳಿವಾಡ ಗ್ರಾಮದಲ್ಲಿ ಜನಿಸಿದ ಕುಮಾರವ್ಯಾಸನ ಮೂಲ ಹೆಸರು ನಾರಾಯಣಪ್ಪ. ಈತನ ಪೂರ್ವಜರು ಕೋಳಿವಾಡ ಗ್ರಾಮದ ಶಾನುಭೋಗರಾಗಿದ್ದರು. ಬಹಳ ಕಾಲದವರೆಗೆ ಕುಮಾರವ್ಯಾಸನ ಹುಟ್ಟೂರಿನ ಕುರಿತು ವಿವಾದಗಳಿದ್ದು ಇತ್ತೀಚೆಗೆ ಎ ವಿ ಪ್ರಸನ್ನ ಎಂಬ ಸಂಶೋಧಕರಿಗೆ ಈ ಕುರಿತು ಇಂದಿಗೂ ಕೋಳಿವಾಡ ಗ್ರಾಮದಲ್ಲಿ ನೆಲೆಸಿರುವ ಕುಮಾರವ್ಯಾಸನ ವಂಶಜರು ದಾಖಲೆಗಳನ್ನು, ತಾಳೆಗರಿಯ ಪ್ರತಿಗಳನ್ನು ನೀಡಿದ್ದು ಕುಮಾರವ್ಯಾಸನ ಕುಮಾರವ್ಯಾಸನ ಹುಟ್ಟೂರು ಕೋಳಿವಾಡ ಎಂಬುದನ್ನು ಪುಷ್ಟಿಗೊಳಿಸಿದ್ದಾರೆ. ವಿಜಯನಗರದ (ಹಂಪಿಯ) 2 ನೆಯ ದೇವರಾಯನ ಕಾಲದಲ್ಲಿ ಅಂದರೆ 14ನೇ ಶತಮಾನದ ಉತ್ತರಾರ್ಧ ಮತ್ತು 15 ನೆಯ ಶತಮಾನದ ಪೂರ್ವಾರ್ಧದಲ್ಲಿ ಸುಮಾರು 70 ವರ್ಷಗಳ ಕಾಲ ಈತ ಜೀವಿಸಿರಬಹುದು ಎಂಬ ಕುರುಹುಗಳಿವೆ. ಕುಮಾರವ್ಯಾಸನು ಪ್ರಭುಲಿಂಗಲೀಲೆಯನ್ನು ರಚಿಸಿದ ಕವಿ ಚಾಮರಸನ ತಂಗಿಯ ಗಂಡ. ಈತನು ಶ್ರೀ ಕೃಷ್ಣದೇವರಾಯನ ಆಸ್ಥಾನದಲ್ಲಿ ಇದ್ದನೆಂದು ಹೇಳಲಾಗುತ್ತದೆ. ತೊರವೆ ರಾಮಾಯಣ ರಚಿಸಿದ ತೊರವೆ ನರಹರಿರಾಯರು ಮತ್ತು ತಿಮ್ಮಣ್ಣ ಕವಿಯ ಸಮಕಾಲೀನನೆಂದು ಕೂಡ ಹೇಳಲಾಗುತ್ತದೆ. ಗದುಗಿನ ವೀರ ನಾರಾಯಣ ದೇಗುಲದ ಬಳಿಯ ಶಾಸನದಲ್ಲಿಯೂ ಕೂಡ ಕುಮಾರವ್ಯಾಸನು ಇಲ್ಲಿಯೇ ನೆಲೆಸಿ ಭಾರತವನ್ನು ಬರೆದ ಕುರಿತು ಮಾಹಿತಿ ಇದೆ. ಪುರಂದರದಾಸರು ಕೂಡ ಹರಿಶರಣರೆನ್ನ ಮನೆಯ ಮೆಟ್ಟಲು ಪಾವನವಾಯಿತು ನಮ್ಮ ಮನೆ ನೋಡ ಎಂದು ತಮ್ಮ ಸುಳಾದಿಗಳಲ್ಲಿ ಕುಮಾರವ್ಯಾಸರು ತಮ್ಮ ಮನೆಗೆ ಬಂದ ಮತ್ತು ಭಾರತವನ್ನು ಕುರಿತು ಮಾತನಾಡಿದ ಬಗ್ಗೆ ವಿವರಿಸಿದ್ದಾರೆ.

ವ್ಯಾಸ ಮಹಾಕವಿಯ ಸಂಸ್ಕೃತ ಮಹಾಭಾರತದ ಅತ್ಯದ್ಭುತ ಕನ್ನಡ ರೂಪವನ್ನು ರಚಿಸಿದ, ವ್ಯಾಸ ಮಹಾಕವಿಯ ಮಾನಸಪುತ್ರ ತಾನೆನ್ನುವ ವಿನೀತ ಭಾವದಿಂದ ನಾರಣಪ್ಪ ಕುಮಾರವ್ಯಾಸ ಎಂದು ತನ್ನನ್ನು ತಾನು ಕರೆದುಕೊಂಡಿದ್ದಾನೆ.ಅವರ ಕಾವ್ಯನಾಮವು ಕನ್ನಡದಲ್ಲಿ ಮಹಾಭಾರತದ ನಿರೂಪಣೆಯ ಶ್ರೇಷ್ಠ ಕೃತಿಯಾಗಿದೆ. ಕುಮಾರ ವ್ಯಾಸ ಎಂದರೆ "ಪುಟ್ಟ ವ್ಯಾಸ" ಅಥವಾ "ವ್ಯಾಸನ ಮಗ" ಎಂದರ್ಥ.

ಕುಮಾರವ್ಯಾಸನ ಅತಿ ಪ್ರಸಿದ್ಧ ಕೃತಿ ಕರ್ಣಾಟ ಭಾರತ ಕಥಾಮಂಜರಿ. ಇದಕ್ಕೆ ಗದುಗಿನ ಭಾರತ, ಕುಮಾರವ್ಯಾಸ ಭಾರತ,ಎಂದು ಕೂಡ ಕರೆಯುತ್ತಾರೆ. ಮಹಾಕವಿ ವ್ಯಾಸರ ಸಂಸ್ಕೃತ ಮಹಾಭಾರತದ ಕನ್ನಡಾನುವಾದ ನಡುಗನ್ನಡದಲ್ಲಿದೆ. ಆದರೆ ಗದುಗಿನ ಭಾರತವನ್ನು ಕೇವಲ ಅನುವಾದವಾಗಿ ಉಳಿಸದೆ ಕುಮಾರವ್ಯಾಸ ತನ್ನ ಸಂಪೂರ್ಣ ಕಾವ್ಯಸಾಮರ್ಥ್ಯವನ್ನು ಈ ಕೃತಿಯಲ್ಲಿ ಸಂಪೂರ್ಣವಾಗಿ ಧಾರೆಯೆರೆದಿದ್ದಾನೆ. ಕನ್ನಡ ಸಾಹಿತ್ಯದ ಮೇರುಕೃತಿಯಾಗಿ ಪರಿಗಣಿತವಾಗಿರುವ ಕನ್ನಡ ಭಾರತ, ಸಂಸ್ಕೃತ ಮಹಾಭಾರತದ ಮೊದಲ ಹತ್ತು ಪರ್ವಗಳು, 147 ಸಂಧಿ, 7971 ಪದ್ಯಗಳನ್ನು ಒಳಗೊಂಡಿದೆ. 'ಕುಮಾರವ್ಯಾಸ ಭಾರತ'ದ ಭಾಷೆ ನಡುಗನ್ನಡ.





**ವೀಣಾ ಹೇಮಂತಗೌಡ ಪಾಟೀಲ್, ಮುಂಡರಗಿ, ಗದಗ**

ಇದು ಮಹಾಭಾರತದ, ಮೊದಲಹತ್ತು ಪರ್ವಗಳ (ಅಧ್ಯಾಯಗಳು) ರೂಪಾಂತರವಾಗಿದೆ.

ಕೃಷ್ಣನ ಭಕ್ತನಾದ ಕುಮಾರ ವ್ಯಾಸನು ತನ್ನಮಹಾಕಾವ್ಯವನ್ನು ಪಾಂಡವರಲ್ಲಿ ಹಿರಿಯನಾದ ಯುಧಿಷ್ಠಿರನ ಪಟ್ಟಾಭಿಷೇಕದೊಂದಿಗೆ ಕೊನೆಗೊಳಿಸುತ್ತಾನೆ ಈ ಕೃತಿಯು ತನ್ನ ಸಾರ್ವತ್ರಿಕ ಆಕರ್ಷಣೆಯಿಂದಾಗಿ ಕನ್ನಡ ಸಾಹಿತ್ಯದಲ್ಲಿ ಆಚರಿಸಲ್ಪಡುತ್ತದೆ.

ಗದುಗಿನ ಭಾರತವನ್ನು ಭಾಮಿನಿ ಷಟ್ಪದಿಯಲ್ಲಿ ರಚಿಸಲಾಗಿದೆ , ಇದು ಆರು ಸಾಲಿನ ಚರಣಗಳ ರೂಪವಾಗಿದೆ. ಕುಮಾರ ವ್ಯಾಸ ಮಾನವ ಭಾವನೆಗಳನ್ನು ಅತ್ಯಂತ ಆಪ್ತವಾಗಿ ಪರಿಶೋಧಿಸುತ್ತಾನೆ, ಮೌಲ್ಯಗಳನ್ನುಒರೆಗೆ ಹಚ್ಚುವ ಕೆಲಸ ಮಾಡುತ್ತಾನೆ ಮತ್ತು ಶಬ್ದಕೋಶದ ವಿಶಿಷ್ಟ ಜ್ಞಾನವನ್ನು ಹೊಂದಿದ್ದು ಪಾಂಡಿತ್ಯವನ್ನು ಪ್ರದರ್ಶಿಸುತ್ತಾನೆ. ಈ ಕೃತಿಯು ಅತ್ಯಾಧುನಿಕ ರೂಪಕಗಳ ಬಳಕೆಗೆ ವಿಶೇಷವಾಗಿ ಹೆಸರುವಾಸಿಯಾಗಿದೆ. ಆದ್ದರಿಂದಲೇ ಕುಮಾರವ್ಯಾಸನನ್ನು ರೂಪಕ ಸಾಮ್ರಾಜ್ಯ ಚಕ್ರವರ್ತಿ ಎಂದು ಕರೆಯುತ್ತಾರೆ.

ಬವರವಾದರೆ ಹರನ ವದನಕೆ ಬೆವರ ತಹೆನವಗಡಿಸುವೆನು ವಾಸವನ ಸದೆವೆನು ಹೊಕ್ಕಡಹುದೆನಿಸುವೆನು ಮಾಧವನ ಎಂಬ ಅಭಿಮನ್ಯುವಿನ ವೀರ ವಾಣಿಯನ್ನು 9ನೇ ತರಗತಿಯಲ್ಲಿ ನಾವು ಓದುತ್ತಿದ್ದಾಗ ನಮ್ಮ ಗುರುಗಳು ಪದ್ಯವನ್ನು ವಿವರಿಸಿ ಹೇಳುತ್ತಿದ್ದರೆ ಅಭಿಮನ್ಯುವಿನ ಕುರಿತ ಅಭಿಮಾನ, ಗೌರವ ಹೆಚ್ಚಿ ರೋಮಾಂಚನವುಂಟು ಮಾಡುತ್ತಿತ್ತು. ಇಂದಿಗೂ ಬಾಯಿಪಾಠವಾಗಿ ಇದನ್ನು ಬರೆಯುವಾಗ ನಮ್ಮನ್ನು ಈ ಮಟ್ಟಿಗೆ ಕುಮಾರವ್ಯಾಸ ಭಾರತದಲ್ಲಿ ತೇಲಿಸಿದ ಕನ್ನಡ ಭಾಷಾ ಶಿಕ್ಷಕರ ಪಠ್ಯ ವೈಖರಿ ಕಣ್ಣ ಮುಂದೆ ತೇಲಿದಂತಾಗುತ್ತದೆ. ಕರ್ಣಾಟ ಭಾರತ ಕಥಾಮಂಜರಿಯನ್ನು ದಶ ಪರ್ವ ಭಾರತ ಎಂದು ಕರೆಯುತ್ತಾರೆ ಏಕೆಂದರೆ ಇದು ಮೂಲ ಮಹಾಭಾರತದಲ್ಲಿ ಹದಿನೆಂಟಕ್ಕೆ ವಿರುದ್ಧವಾಗಿ ಕೇವಲ ಹತ್ತು ಪರ್ವಗಳನ್ನು ಹೊಂದಿದ್ದು ನಡುಗನ್ನಡ ಅಂದರೆ ಮಧ್ಯಯುಗದ ಕನ್ನಡ ಸಾಹಿತ್ಯದ ವಿಕಾಸದ ಹಂತಗಳಲ್ಲಿ ನಂತರದ ಕನ್ನಡ ಸಾಹಿತ್ಯದ ಮೇಲೆ ಕುಮಾರವ್ಯಾಸ ಭಾರತದ ಪ್ರಭಾವ ಗಮನಾರ್ಹವಾಗಿದೆ.

ಕುಮಾರವ್ಯಾಸನು ತನ್ನ ಕವನದಲ್ಲಿ "ರಾಜನು ಶೌರ್ಯವನ್ನು ಆನಂದಿಸುತ್ತಾನೆ, ಬ್ರಾಹ್ಮಣನು ಎಲ್ಲಾ ವೇದಗಳ ಸಾರವನ್ನು, ತತ್ವಜ್ಞಾನಿ ಅಂತಿಮ ತತ್ವಶಾಸ್ತ್ರ, ಮಂತ್ರಿಗಳು ಮತ್ತು ರಾಜ್ಯ ಆಡಳಿತಗಾರರು ಆಡಳಿತದ ತಂತ್ರ ಮತ್ತು ಪ್ರೇಮಿಗಳು ಪ್ರಣಯ ಟಿಪ್ಪಣಿಗಳನ್ನು ಆನಂದಿಸುತ್ತಾರೆ ಎಂದು ಹೇಳಿದ್ದಾನೆ.

ಗದುಗಿನ ಭಾರತವನ್ನು ಇಂದಿಗೂ ವ್ಯಾಪಕವಾಗಿ ಓದಲಾಗುತ್ತದೆ. ಗಮಕ ಎಂದು ಕರೆಯಲ್ಪಡುವ ವಿಶಿಷ್ಟಶೈಲಿಯಲ್ಲಿ ಇದನ್ನು ಜನಪ್ರಿಯವಾಗಿ ಹಾಡಲಾಗುತ್ತದೆ. ಇತ್ತೀಚೆಗೆ ಗದಗ ಜಿಲ್ಲೆಯ ವಿವಿಧೆಡೆಗಳಲ್ಲಿ ಕುಮಾರವ್ಯಾಸನ ಭಾರತದ ಗಮಕ ವಾಚನವನ್ನು ತಿಂಗಳ ಪರ್ಯಂತ ಪ್ರಸ್ತುತಪಡಿಸಿದರು.

ಕುಮಾರವ್ಯಾಸನ ಮಹತ್ವವನ್ನು ಕನ್ನಡಿಗರಿಗೆ ಸಾರಲೆಂದೇ ಕವಿ ಕುವೆಂಪು ಅವರು

ಕುಮಾರವ್ಯಾಸನು ಹಾಡಿದನೆಂದರೆ ಕಲಿಯುಗ ದ್ವಾಪರವಾಗುವುದು

ಭಾರತ ಕಣ್ಣಲ್ಲಿ ಕುಣಿಯುವುದು ಮಿಂಚಿನ ಹೊಳೆ ಕುಣಿದಾಡುವುದು ಎಂದು ಹಾಡಿದ್ದಾರೆ. ಕನ್ನಡಕ್ಕೆ ಮಹಾಭಾರತವನ್ನು ತಂದುಕೊಟ್ಟ ಹಲವಾರು ರೂಪಕಗಳ ಮೂಲಕ ತಾನು ಬರೆದ ಗದ್ಯವನ್ನು ಅಜರಾಮರಗೊಳಿಸಿದ ಕುಮಾರವ್ಯಾಸನಿಗೆ ಆತನ ಜನ್ಮದಿನದಂದು ಕನ್ನಡ ಜನತೆಯ ಸಹಸ್ರ ಕೋಟಿ ನಮನಗಳು

# ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ

## ಕಾಯಕ ದೇವೋಭವ ಹಾಗೂ ವಿವಿಧ ಕಾರ್ಯಕ್ರಮಗಳ ಆಯೋಜನೆ

■ **ಹಂಪಿ ಟೈಮ್ಸ್ ಕೊಪ್ಪಳ**
2024 ರ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಗವಿಮಠದ ವಿಭಿನ್ನ ಸಾಮಾಜಿಕ ಕಳಕಳಿಯ ಕಾರ್ಯಕ್ರಮಕ್ಕೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಸಹಭಾಗಿತ್ವದಲ್ಲಿ ಸಾಮಾಜಿಕ ಧ್ಯೇಯ ವಿಷಯವಾಗಿ ಕಾಯಕ ದೇವೋಭವ ಎಂಬ ಶೀರ್ಷಿಕೆಯ ಸ್ವಾವಲಂಬಿ ಬದುಕು, ಸಮೃದ್ಧಿ ಬದುಕು, ಸಂತೋಷದ ಬದುಕು ಎಂಬ ಘೋಷವಾಕ್ಯದೊಂದಿಗೆ ಸ್ವಯಂ ಉದ್ಯೋಗ ಹಾಗೂ ವೃತ್ತಿ ಕೌಶಲ್ಯದ ಅರಿವು ಮತ್ತು ಮಹತ್ವ ತಿಳಿಸುವ ಹಾಗೂ ಜನರಿಗೆ ಪ್ರೇರೇಪಿಸುವ ವಿನೂತನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ತಿಳಿಸಿದ್ದಾರೆ.

ಸ್ವಯಂ ಉದ್ಯೋಗದಿಂದ ಸ್ವಾವಲಂಬಿ ಬದುಕು ವಿಷಯವಾಗಿ ಭಾಷಣ ಸ್ಪರ್ಧೆಯನ್ನು ಜನವರಿ 10 ರಂದು ಜಿಲ್ಲೆಯ ಎಲ್ಲ ಸರಕಾರಿ, ಅನುದಾನಿತ, ಖಾಸಗಿ ಪ್ರೌಢಶಾಲೆ, ಪದವಿ ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಕೇಂದ್ರಗಳಲ್ಲಿ ಆಯೋಜಿಸಬೇಕು. ನಂತರ ಆಯ್ಕೆಯಾದ ವಿದ್ಯಾರ್ಥಿಗಳನ್ನು ಜನವರಿ 13 ರಂದು ಬೆಳಿಗ್ಗೆ 10.30 ಗಂಟೆಗೆ ಶ್ರೀ ಗವಿಸಿದ್ದೇಶ್ವರ ಪದವಿ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಭಾಷಣ ಸ್ಪರ್ಧೆಗೆ ಒಬ್ಬ ಶಿಕ್ಷಕ/ಶಿಕ್ಷಕಿಯರೊಂದಿಗೆ ಕಳುಹಿಸಿಕೊಡಬೇಕು. ಈ ಕುರಿತಂತೆ ಡಿಡಿಪಿಐ, ಡಿಡಿಪಿಯು, ಕೊಪ್ಪಳ ವಿವಿ ಅಗತ್ಯ ಕ್ರಮ ಹಾಗೂ ಮೇಲುಸ್ತುವಾರಿಯನ್ನು ವಹಿಸಿಕೊಳ್ಳಬೇಕು.

ಕಾಯಕ ದೇವೋಭವ ಜಾಗೃತಿ ಅಭಿಯಾನವನ್ನು ನಡಿಗೆಯ ಜಾಥಾ ಮೂಲಕ ಜಿಲ್ಲೆಯ ಎಲ್ಲಾ ಹಳ್ಳಿ/ನಗರ ಪ್ರದೇಶಗಳಲ್ಲಿ ಸರ್ಕಾರಿ, ಅನುದಾನಿತ, ಖಾಸಗಿ ಶಾಲಾ ಕಾಲೇಜುಗಳು, ಸ್ವ-ಸಹಾಯ ಸಂಘಗಳು, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಪಾಲಕರು ಮುಂತಾದವರನ್ನು ಸೇರಿಸಿಕೊಂಡು ಜಿಲ್ಲೆ ಹಾಗೂ ತಾಲ್ಲೂಕುಗಳ ಎಲ್ಲ ಇಲಾಖೆಗಳ ಅಧಿಕಾರಿಗಳು ನಿಮ್ಮ ಕಾರ್ಯವ್ಯಾಪ್ತಿಯಲ್ಲಿ ಜಾಗೃತಿ ನಡಿಗೆಯನ್ನು ಆಯೋಜಿಸಬೇಕು.

ಜನವರಿ 24 ರ ಬುಧವಾರ ಬೆಳಿಗ್ಗೆ 08 ಗಂಟೆಗೆ ಕಾಯಕ ದೇವೋಭವ ಜಾಗೃತಿ ಅಭಿಯಾನವನ್ನು ನಡಿಗೆಯ ಜಾಥಾ ಮೂಲಕ ನಗರದಲ್ಲಿ ಹಮ್ಮಿಕೊಳ್ಳಬೇಕು. ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನ(ತಾಲ್ಲೂಕು ಕ್ರೀಡಾಂಗಣ) ದಿಂದ ಆರಂಭವಾಗಿ ಅಶೋಕ ವೃತ್ತ, ಗಡಿಯಾರ ಕಂಬದ ಮೂಲಕ ಶ್ರೀ ಗವಿಮಠ ತಲುಪುವ ನಡಿಗೆ ಜಾಥಾಕ್ಕೆ ಕೊಪ್ಪಳ ನಗರದ ಎಲ್ಲ ಸರಕಾರಿ, ಅನುದಾನಿತ, ಖಾಸಗಿ ಪ್ರೌಢಶಾಲೆ, ಪದವಿ ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಕೇಂದ್ರಗಳು ಮತ್ತು ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗಿಯಾಗುವಂತೆ ಸಂಬಂಧಿಸಿದ ಶಾಲಾ, ಕಾಲೇಜು ಮುಖ್ಯಸ್ಥರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಿಡಿಪಿಐ, ಡಿಡಿಪಿಯು ಹಾಗೂ ಕೊಪ್ಪಳ ವಿವಿ ಕುಲಪತಿಗಳು ಸೂಕ್ತ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕವಿ ಮನಸು

### ಈ ಜಗದೊಡೆಯ



ಮೂವರು ಮಡದಿಯರಿದ್ದರು
ಜೊತೆಯಲಿ
ಅಯೋಧ್ಯಾಧಿಪತಿ ದಶರಥಗೆ
ಪುತ್ರರು ಇಲ್ಲದ ಸಂಕಟ ಅನುದಿನ
ಕಾಡುತಲಿದ್ದಿತು ಮನದೊಳಗೆ

ಗುರುಗಳ ಸಲಹೆಯ ಮೇರೆಗೆ
ಮಾಡಿದ
ಪುತ್ರಕಾಮೇಷ್ಟಿ ಯಾಗವನು
ಸಫಲತೆ ಕಂಡನು ಯಜ್ಞದ
ಫಲಶ್ರುತಿ
ಪಡೆದನು ನಾಲ್ವರು ಪುತ್ರರನು

ಹಿರಿಯವನಾಗಿಯೆ ರಾಮನು
ಜನಿಸಿದ
ರಾಣಿ ಕೌಸಲ್ಯೆಯ ಉದರದಲಿ
ರಾಜಕುಮಾರನು ಮುಂದಿನ
ರಾಜನು
ಎನ್ನುವ ಗೌರವ ಜನರಲ್ಲಿ

ಶಸ್ತ್ರಾಭ್ಯಾಸವ ಪಡೆದನು ರಾಮನು
ಪರಿಣಿತನಾದನು ಬಾಲ್ಯದಲೇ
ಮುನಿಗಳ ಕಾಡಿದ ದನುಜರ
ಅಳಿಸಿದ
ಎಳೆತನದಲ್ಲಿಯೆ ಶೌರ್ಯದಲಿ

ಎಲ್ಲರ ಕಣ್ಮಣಿ ಶ್ರೀರಾಮಚಂದ್ರನು
ಮಹಾವಿಷ್ಣುವಿನವತಾರ
ಈ ಜಗದೊಡೆಯಗೆ ಸುಂದರ
ಮಂದಿರ
ಭಕ್ತರ ಕನಸಿನ ಸಾಕಾರ॥

– ಪೆರ್ಮುಖ ಸುಬ್ರಹ್ಮಣ್ಯ ಭಟ್

ಉಚಿತ-ಖಚಿತ!
ಪತ್ರಿಕೆಯ ಓದು ಕಣ್ಣಿಗೆ ಹಿತ, ಮೊಬೈಲ್ ಓದು ಉಚಿತ, ಕಣ್ಣಿಗೆ ಹಾನಿ ಖಚಿತ!
ಮಕ್ಕಳ ಕೈಗೆ ಮೊಬೈಲ್ ಬದಲಿಗೆ, ಪತ್ರಿಕೆ ನೀಡಿ ಬದಲಾವಣೆ ಕಾಣಿರಿ...
ಸ್ಥಳೀಯ ಸುದ್ದಿಗಳಿಗಾಗಿ ಹಂಪಿ ಟೈಮ್ಸ್ ಪತ್ರಿಕೆ ಓದಿರಿ
ಹಂಪಿ ಟೈಮ್ಸ್ ಬಳಗದ ಕಳಕಳಿ
ಬೆಲೆ ರೂ 2

## ತುಂಗಭದ್ರಾ ನೀರಿನ ಮಟ್ಟ



| ಗುರುವಾರ : 04-01-2024 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1589.05 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 00 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 10.254 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1623.91 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 8551 ಕ್ಯುಸೆಕ್ |
| ಸಾಮರ್ಥ್ಯ | 72.982 ಟಿಎಂಸಿ |

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

# ಮಣ್ಣು ಪರೀಕ್ಷೆ ಮಾಡಿಸಿ ರಸಗೊಬ್ಬರ ಬಳಸಿ

## ಮೆಣಸಿನಕಾಯಿ ಬೆಳೆಯ ಸಮಗ್ರ ನಿರ್ವಹಣೆ ತರಬೇತಿ ಕಾರ್ಯಾಗಾರ

■ **ಹಂಪಿ ಟೈಮ್ಸ್ ಬಳ್ಳಾರಿ**

ತೋಟಗಾರಿಕೆ ಇಲಾಖೆ, ಹಗರಿ ಕೃಷಿ ವಿಜ್ಞಾನ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ 2023–24 ನೇ ಸಾಲಿನ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ "ಮೆಣಸಿನಕಾಯಿ ಬೆಳೆಯ ಸಮಗ್ರ ನಿರ್ವಹಣೆ" ಕುರಿತು ಕುರುಗೋಡು ತಾಲ್ಲೂಕಿನ ಬೈಲೂರು ಗ್ರಾಮದ ಮಲ್ಲಪ್ಪ ತಾತಾನವರ ಹೊಲದಲ್ಲಿ ರೈತರಿಗೆ ಇತ್ತೀಚೆಗೆ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ರತ್ನಪ್ರಿಯಾ ಯರಗಲ್ಲ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ರೈತರು ಮೆಣಸಿನಕಾಯಿಯಲ್ಲಿ ಬರುವ ರೋಗ ಮತ್ತು ಕೀಟಗಳ ನಿರ್ವಹಣೆ ಬಗ್ಗೆ ಅರಿತುಕೊಳ್ಳಬೇಕು. ತೋಟಗಾರಿಕೆ ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳನ್ನು ಪಡೆದುಕೊಂಡು ಅಭಿವೃದ್ಧಿ ಹೊಂದಬೇಕು ಎಂದು ಹೇಳಿದರು.

ಹಗರಿ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ಎಂ. ಆರ್ ಗೋವಿಂದಪ್ಪನವರು ಮಾತನಾಡಿ, ರೈತರು ಮೆಣಸಿನಕಾಯಿ ಬೆಳೆಯನ್ನು ಹತ್ತಿರದ ಸಾಲುಗಳಲ್ಲಿ ನಾಟಿ ಮಾಡುವುದರಿಂದ ಗಿಡಗಳಲ್ಲಿ ಬೆಳಕಿನ ಕೊರತೆ ಮತ್ತು ಗಾಳಿ ಹರಡುವಿಕೆ ಕಡಿಮೆಯಾಗಿ ಬೆಳೆಗಳಲ್ಲಿ ರೋಗ ಮತ್ತು ಕೀಟ ಭಾದೆ ಸಮಸ್ಯೆ ಹೆಚ್ಚುತ್ತದೆ.

ಆದ್ದರಿಂದ ರೈತರು ಅಗಲವಾದ ಸಾಲುಗಳನ್ನು




ಮಾಡಿ ನಾಟಿ ಮಾಡಬೇಕು ಮತ್ತು ಜೈವಿಕ ಶಿಲೀಂದ್ರ ನಾಶಕಗಳನ್ನು ಹೆಚ್ಚು ಬಳಸುವುದರಿಂದ ಭೂಮಿಯಿಂದ ಬರುವ ರೋಗಗಳನ್ನು ತಡೆಗಟ್ಟಬಹುದು ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ.ರವಿ.ಎಸ್ ಅವರು ಮಾತನಾಡಿ, ಮೆಣಸಿನಕಾಯಿ ಬೆಳೆಯಲ್ಲಿ ಹೆಚ್ಚು ರಸಗೊಬ್ಬರಗಳನ್ನು ಅವೈಜ್ಞಾನಿಕವಾಗಿ ಮಣ್ಣು ಪರೀಕ್ಷೆ ಮಾಡಿಸದೆ ಗಿಡಗಳಿಗೆ ಬಳಸುವುದರಿಂದ ಮಣ್ಣು ಫಲವತ್ತತೆ ಕಡಿಮೆಯಾಗಿ ಇಳುವರಿ ಕಡಿಮೆಯಾಗುತ್ತದೆ ಎಂದು ತಿಳಿಸಿದರು.

ಸೂಕ್ಷ್ಮಜೀವಿಗಳ ಸಂಖ್ಯೆ ಮತ್ತು ಅವುಗಳ ಚಟುವಟಿಕೆ ಕಡಿಮೆಯಾಗಿ ಹೊಲದಲ್ಲಿ ಪೋಷಕಾಂಶಗಳ ಲಭ್ಯತೆ ಮತ್ತು ಪ್ರಸರಣೆ ಕಡಿಮೆಯಾಗುತ್ತದೆ. ಇದರಿಂದ ಗಿಡಗಳ ಬೆಳವಣಿಗೆ ಕುಂಠಿತಗೊಂಡು ಇಳುವರಿ ಕಡಿಮೆಯಾಗುತ್ತದೆ. ಆದ್ದರಿಂದ ರೈತರು ಹೆಚ್ಚು ಸಾವಯುವ ಮತ್ತು ಜೈವಿಕೆ ರಸಗೊಬ್ಬರಗಳನ್ನು ಬಳಸಬೇಕು ಎಂದು ರೈತರಿಗೆ ಮನವರಿಕೆ ಮಾಡಿದರು.

ಕಾರ್ಯಕ್ರಮದಲ್ಲಿ ಬೈಲೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್ವರ್, ಕೋಳೂರು ಸಹಾಯಕ ತೋಟಗಾರಿಕೆ ಅಧಿಕಾರಿ ರಾಘವೇಂದ್ರ, ಕುರುಗೋಡು ಸಹಾಯಕ ತೋಟಗಾರಿಕೆ ಅಧಿಕಾರಿ ಕಿರಣಕುಮಾರ್, ತೋಟಗಾರಿಕೆ ಸಹಾಯಕ ಪ್ರಭಾಕರ, ಕೃಷಿ ಅಧಿಕಾರಿ ಹೊಸಕೆರೆಪ್ಪ ಹಾಗೂ ಆತ್ಮ ಯೋಜನೆಯ ರೇಣುಕರಾದ್ಯ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಉಪಾಧ್ಯಕ್ಷ ಮಂಜುನಾಥ, ಕಾರ್ಯದರ್ಶಿ ಮದ್ವೇಶ್ವರ್ ರಾವ್ ಸೇರಿದಂತೆ ಬೈಲೂರು ಗ್ರಾಮದ 85ಕ್ಕೂ ಹೆಚ್ಚು ಮೆಣಸಿನಕಾಯಿ ಬೆಳೆಗಾರರು, ಪ್ರಗತಿಪರ ರೈತರು ಮತ್ತೀತರರು ಉಪಸ್ಥಿತರಿದ್ದರು.

# ಕೃಷಿ ಇಲಾಖೆಯಿಂದ ಸಿರಿಧಾನ್ಯಗಳ ಬಳಕೆಯ ಜಾಗೃತಿ ನಡಿಗೆ



■ **ಹಂಪಿ ಟೈಮ್ಸ್ ಬಳ್ಳಾರಿ**

ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ–2024ರ ಅಂಗವಾಗಿ ಸಿರಿಧಾನ್ಯ ಬಳಕೆ ಹಾಗೂ ಆರೋಗ್ಯ ದೃಷ್ಟಿಯಿಂದ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕೃಷಿ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಗುರುವಾರ ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆ ನಡೆಯಿತು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಜಾಗೃತಿ ನಡಿಗೆಯಲ್ಲಿ 'ಜೋಳ ತಿಂದವನು ತೋಳದಂತಾಗುವನು, ಅಕ್ಕಿಯನ್ನು ತಿಂದವನು ಹಕ್ಕಿಯಂತಾಗುವನು', 'ಸಿರಿಧಾನ್ಯ ತಾಕತ್ತು ಸಕಲ ಪೌಷ್ಠಿಕಾಂಶಗಳ ಸಂಪತ್ತು', 'ರಾಗಿ ತಿಂದವನು ರೋಗದಂತೆ ಮುಕ್ತರಾಗುವರು', 'ಸಿರಿಧಾನ್ಯ ತಿಂದವರು ಆರೋಗ್ಯದಿಂದ ಸಿರಿವಂತರಾಗುವರು' ಎಂಬ ಸಂದೇಶ ಸಾರುವ ಫಲಕಗಳನ್ನು ಹಿಡಿದು ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆಯು ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾಗಿ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಎಸ್.ಪಿ.ವೃತ್ತ ಮೂಲಕ ಕನಕದುರ್ಗಮ್ಮ ದೇವಸ್ಥಾನ ಮಾರ್ಗವಾಗಿ ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ಮರಳಿ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ಮರಳಿತು. ಡೊಳ್ಳು ಕುಣಿತ, ಮೆರವಣಿಗೆಯಲ್ಲಿ ವಿಶೇಷ ಆಕರ್ಷಣೆಯಾಗಿತ್ತು. ನಡಿಗೆಯಲ್ಲಿ ಸುಮಾರು 300 ಕ್ಕೂ ಜನ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಸಹಾಯಕ ಆಯುಕ್ತ ಹೇಮಂತ್ ಕುಮಾರ್, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಕೃಷಿ ಜಂಟಿ ನಿರ್ದೇಶಕ ಕೆ.ಮಲ್ಲಿಕಾರ್ಜುನ ಸೇರಿದಂತೆ ಕೃಷಿ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ನಡಿಗೆಯ ನಂತರ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸವಿಯಲು ಸಿರಿಧಾನ್ಯದ ಸಾಮಿ ಪಾಯಸ, ಸಾಮೆ ಉಪ್ಪಿಟ್ಟು, ನವಣೆ ಬಾತ್, ಸಾವಯವದ ಬೆಲ್ಲದ ಛಾಯೆನು ಉಪಹಾರ ವ್ಯವಸ್ಥೆ ಮಾಡಲಾಗಿತ್ತು. ಜಿಲ್ಲಾಧಿಕಾರಿಗಳು, ಇತರೆ ಅಧಿಕಾರಿಗಳು ಮತ್ತು ಸಾರ್ವಜನಿಕರು ಸಿರಿಧಾನ್ಯಗಳಿಂದ ಮಾಡಿದ ಉಪ್ಪಿಟ್ಟು, ನವಣೆ ಬಾತ್ ಮತ್ತು ಸಿಹಿ ಪಾಯಸವನ್ನು ಸವಿದರು.

# ಯುವ ಸಮಾಲೋಚಕರು ಹಾಗೂ ಯುವ ಪರಿವರ್ತಕರ ತರಬೇತಿಗೆ ನೇರ ಸಂದರ್ಶನ: ಅರ್ಜಿ ಆಹ್ವಾನ

■ **ಹಂಪಿ ಟೈಮ್ಸ್ ಬಳ್ಳಾರಿ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ "ಯುವ ಸ್ಪಂದನ" ಕಾರ್ಯಕ್ರಮದಡಿಯಲ್ಲಿ ಹೊಸದಾಗಿ ಯುವ ಸಮಾಲೋಚಕರು ಹಾಗೂ ಯುವ ಪರಿವರ್ತಕರ ತರಬೇತಿಗೆ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

ಯುವಜನತೆಗೆ ಸಂಬಂಧಿಸಿದ ವಿಷಯಗಳಿಗೆ ಸಂಪನ್ಮೂಲ ವ್ಯಕ್ತಿಗಳಾಗಿ ತರಬೇತಿ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಯ್ಕೆಯಾದ ಅಭ್ಯರ್ಥಿಗಳು ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ(ನಿಮ್ಹಾನ್ಸ್) ಬೆಂಗಳೂರು ಇಲ್ಲಿ ತರಬೇತಿ ಪಡೆಯಲಿದ್ದು, ಅಲ್ಲಿ ಆಯ್ಕೆಯಾದ ನಂತರ ಯುವ ಪರಿವರ್ತಕ ಯುವ ಸಮಾಲೋಚಕರೆಂದು ಪ್ರಮಾಣೀಕರಿಸಲಾಗುತ್ತದೆ.

**ಯುವ ಪರಿವರ್ತಕರು:** ಬಳ್ಳಾರಿ, ಕಂಪ್ಲಿ, ಸಿರುಗುಪ್ಪ, ಸಂಡೂರು, ಕುರುಗೋಡು ತಾಲ್ಲೂಕಿನಲ್ಲಿ 06 ಯುವ ಪರಿವರ್ತಕರ ಹುದ್ದೆ ಖಾಲಿಯಿರುತ್ತವೆ.

**ಶೈಕ್ಷಣಿಕ ಅರ್ಹತೆ:** ಪದವಿ ಹಾಗೂ ಮೇಲ್ಪಟ್ಟು (Psychology/Social work) ಪದವಿ ತೇರ್ಗಡೆ ಹೊಂದಿರಬೇಕು. ಸಮುದಾಯದಲ್ಲಿ ಕೆಲಸ ಮಾಡಿ ಅನುಭವ ಇರುವವರಿಗೆ ಆದ್ಯತೆ. ಸಾರ್ವಜನಿಕರ ಮಾನಸಿಕ ಆರೋಗ್ಯ ಸಂವರ್ಧನ ಸೇವೆಗಳ ಬಗ್ಗೆ ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ ಹಾಗೂ ಹುಮ್ಮಸ್ಸು ಹೊಂದಿರಬೇಕು. ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು. ಪರಸ್ಪರ ಭಾಂದವ್ಯಾಭಿವೃದ್ಧಿಯ ಕೌಶಲ್ಯ, ತರಬೇತಿ ನೀಡುವ ಕೌಶಲ್ಯ, ಸಂವಹನ ಮತ್ತು ಉಲ್ಲೇಖ ಸೇವೆಗಳಿಗೆ ಸಂಘ ಸಂಸ್ಥೆಗಳ ಜೊತೆ ಸಹಯೋಗ ಏರ್ಪಡಿಸುವ ಕೌಶಲ್ಯಗಳು ಇರಬೇಕು. ವಯೋಮಿತಿ 21 ರಿಂದ 35 ವರ್ಷ ಹೊಂದಿರಬೇಕು. ಗೌರವಧನ ಮತ್ತು ಅವಧಿ ಪ್ರಮಾಣಿಕೃತ ಅಭ್ಯರ್ಥಿಗಳಿಗೆ ತಿಂಗಳಿಗೆ ಗೌರವಧನ ಹಾಗೂ ಪ್ರವಾಸ ಭತ್ಯೆ ಆರು ತಿಂಗಳ ಕಾಲ ನೀಡಲಾಗುವುದು.

**ಯುವ ಸಮಾಲೋಚಕ:** ಬಳ್ಳಾರಿ ಜಿಲ್ಲೆಗೆ ಖಾಲಿಯಿರುವ 01 ಹುದ್ದೆಗೆ ಯುವ ಪರಿವರ್ತಕರನ್ನು ತರಬೇತಿಗೆ ಆಯ್ಕೆ ಮಾಡಲಾಗುವುದು.

ಶೈಕ್ಷಣಿಕ ಅರ್ಹತೆ: ಪದವಿ ಹಾಗೂ ಎಂಎಸ್‌ಡಬ್ಲ್ಯೂ (Psychology/Social work) ಪದವಿ ತೇರ್ಗಡೆ ಹೊಂದಿರಬೇಕು. ಸಮುದಾಯದಲ್ಲಿ ಕೆಲಸ ಮಾಡಿ ಅನುಭವ ಇರುವವರಿಗೆ ಆದ್ಯತೆ. ಆಪ್ತ ಸಮಾಲೋಚನೆಯನ್ನು ಒದಗಿಸುವ ಕೌಶಲ್ಯವನ್ನು ಹೊಂದಿರಬೇಕು. ಸಾರ್ವಜನಿಕರ ಮಾನಸಿಕ ಆರೋಗ್ಯ ಸಂವರ್ಧನ ಸೇವೆಗಳ ಬಗ್ಗೆ ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ ಹಾಗೂ ಹುಮ್ಮಸ್ಸು ಹೊಂದಿರಬೇಕು. ಕನ್ನಡವನ್ನು ಸ್ವಚ್ಛವಾಗಿ ಮಾತನಾಡುವುದು ಅವಶ್ಯಕ. ಪರಸ್ಪರ ಭಾಂದವ್ಯಾಭಿವೃದ್ಧಿಯ ಕೌಶಲ್ಯ, ತರಬೇತಿ ನೀಡುವ ಕೌಶಲ್ಯ, ಸಂವಹನ ಮತ್ತು ಉಲ್ಲೇಖ ಸೇವೆಗಳಿಗೆ ಸಂಘ ಸಂಸ್ಥೆಗಳ ಜೊತೆ ಸಹಯೋಗ ಏರ್ಪಡಿಸುವ ಕೌಶಲ್ಯಗಳು ಇರಬೇಕು. ವಯೋಮಿತಿ 21 ರಿಂದ 35 ವರ್ಷ. ಗೌರವಧನ ಮತ್ತು ಅವಧಿ ಪ್ರಮಾಣೀಕೃತ ಅಭ್ಯರ್ಥಿಗಳಿಗೆ ತಿಂಗಳಿಗೆ ಗೌರವಧನ ಹಾಗು ಪ್ರವಾಸ ಭತ್ಯೆ ಆರು ತಿಂಗಳ ಕಾಲ ನೀಡಲಾಗುವುದು. ಅರ್ಜಿ ಸಲ್ಲಿಸಲು ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಸಂಪೂರ್ಣ ವಿಳಾಸ, ವಯಸ್ಸು, ವಾಸಿಸುತ್ತಿರುವ ವಿಳಾಸ, ವೈಯಕ್ತಿಕ ಮಾಹಿತಿಯೊಂದಿಗೆ ಜ.13 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಯುವ ಸ್ಪಂದನ ಕೇಂದ್ರ ಬಿಡಿಎಎ ಫುಟ್‌ಬಾಲ್ ಮೈದಾನ ಮತ್ತು ಜಿಲ್ಲಾ ಕ್ರೀಡಾಂಗಣ ಕಚೇರಿಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಗ್ರೇಸಿ ಅವರು ತಿಳಿಸಿದ್ದಾರೆ.

14 ಭಾಷೆ
ಹಂಪಿ ಟೈಮ್ಸ್ ವೆಬ್‌ನ್ಯೂಸ್‌ಗೆ ಭೇಟಿ ನೀಡಿ, ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
www.hampitimes.com

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಸ್ಥಳೀಯ ಸುದ್ದಿಗಳಿಗಾಗಿ ಭೇಟಿ ನೀಡಿ
www.hampitimes.com
epaper.hampitimes.com

# ಕ.ಕ ವೃಂದದ ಗ್ರೂಪ್ ಸಿ ಹುದ್ದೆ ನೇಮಕಾತಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

■ **ಹಂಪಿ ಟೈಮ್ಸ್ ಕೊಪ್ಪಳ**

ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ತೆರಿಗೆ ಇಲಾಖೆಯಲ್ಲಿನ ವಾಣಿಜ್ಯ ತೆರಿಗೆ ಪರಿವೀಕ್ಷಕರ ಕಲ್ಯಾಣ ಕರ್ನಾಟಕ ವೃಂದದ ಗ್ರೂಪ್–ಸಿ ಹುದ್ದೆಗಳ ನೇಮಕಾತಿ ಪರೀಕ್ಷೆಗಳು ಜನವರಿ 06 ಮತ್ತು 07 ರಂದು ಕೊಪ್ಪಳ ತಾಲ್ಲೂಕಿನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳನ್ನು ಸುಸೂತ್ರವಾಗಿ ಮತ್ತು ದೋಷರಹಿತವಾಗಿ ನಡೆಸುವ ಉದ್ದೇಶದಿಂದ ಜನವರಿ 06 ರಂದು ಮಧ್ಯಾಹ್ನ 02 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ಹಾಗೂ ಜನವರಿ 07 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 04 ಗಂಟೆಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಸಿ.ಆರ್.ಪಿ.ಸಿ 1973 ಕಲಂ 144 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಆದೇಶ ಹೊರಡಿಸಿದ್ದಾರೆ.

ನಗರದ ಸರಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಭಾಗ್ಯನಗರದ ಸರ್ಕಾರಿ ಪಿಯು ಕಾಲೇಜು ಮತ್ತು ಪ್ರೌಢಶಾಲಾ ವಿಭಾಗ, ಬಹದ್ದೂರಬಂಡಿಯ ಪಿಎಂ ಶ್ರೀ ಕೇಂದ್ರೀಯ ವಿದ್ಯಾಲಯ, ಟಣಕನಕಲ್‌ನ ಆದರ್ಶ ವಿದ್ಯಾಲಯ(ಆರ್‌ಎಂಎಸ್‌ಎ), ಸರ್ಕಾರಿ ಬಾಲಕರ ಪಿಯು ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಸರ್ಕಾರಿ ಬಾಲಕರ ಪಿಯು ಕಾಲೇಜು(ಪ್ರೌಢಶಾಲಾ ವಿಭಾಗ), ಶ್ರೀ ಗವಿಸಿದ್ದೇಶ್ವರ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಎಸ್‌ಜಿ ಕಾಂಪೋಸಿಟ್ ಪ್ರೌಢಶಾಲೆ, ಶ್ರೀ ಗವಿಸಿದ್ದೇಶ್ವರ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪಿಯು ಕಾಲೇಜುಗಳಲ್ಲಿ ಜ.06 ಮತ್ತು 07 ರಂದು ಪರೀಕ್ಷೆಗಳು ನಡೆಯಲಿವೆ.

ಆದೇಶದನ್ವಯ ಪರೀಕ್ಷಾ ಮೌಲ್ಯಮಾಪನ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ. ಮೊಬೈಲ್, ಪೇಜರ್, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಮೌಲ್ಯಮಾಪನ ಕೇಂದ್ರದ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತ ದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. 200 ಮೀಟರ್ ಪರೀಕ್ಷಾ ಮೌಲ್ಯಮಾಪನ ಕೇಂದ್ರದ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ವಾಣಿಜ್ಯ ತೆರಿಗೆ ಗ್ರೂಪ್ ಸಿ 15 ಪರೀಕ್ಷೆಯಲ್ಲಿ ನಿಯಮ ಪಾಲಿಸಿ

■ **ಹಂಪಿ ಟೈಮ್ಸ್ ರಾಯಚೂರು**

ಜ.6ಮತ್ತು ಜ.7ರಂದು ನಗರದಲ್ಲಿ ಕರ್ನಾಟಕ ಲೋಕ ಸೇವಾ ಆಯೋಗವು ನಡೆಸುತ್ತಿರುವ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿನ ಕಲ್ಯಾಣ ಕರ್ನಾಟಕ ವೃಂದದ ವಾಣಿಜ್ಯ ತೆರಿಗೆ ಪರಿವೀಕ್ಷಕರು ಗ್ರೂಪ್ ಸಿ 15 ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಹಾಗೂ ಯಾವುದೇ ಲೋಪದೋಷಗಳಾಗದಂತೆ ನಿಯಮಾನುಸಾರವಾಗಿ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಡಾ.ಕೆ.ಆರ್ ದುರುಗೇಶ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಜ.04ರ ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿನ ಕಲ್ಯಾಣ ಕರ್ನಾಟಕ ವೃಂದದ ವಾಣಿಜ್ಯ ತೆರಿಗೆ ಪರಿವೀಕ್ಷಕರು ಗ್ರೂಪ್ ಸಿ 15 ಹುದ್ದೆಗಳಿಗೆ ಕಡ್ಡಾತ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ದತೆಗಳ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜ.6ರಂದು ರಾಯಚೂರು ತಾಲೂಕು ವ್ಯಾಪ್ತಿಯ 10 ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ ಜ.7ರಂದು 11 ಪರೀಕ್ಷಾ ಕೇಂದ್ರಗಳಲ್ಲಿ ನಡೆಯುತ್ತಿರುವ ಕರ್ನಾಟಕ ಲೋಕ



ಸೇವಾ ಆಯೋಗವು ನಡೆಸುತ್ತಿರುವ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿನ ಕಲ್ಯಾಣ ಕರ್ನಾಟಕ ವೃಂದದ ವಾಣಿಜ್ಯ ತೆರಿಗೆ ಪರಿವೀಕ್ಷಕರು ಗ್ರೂಪ್ ಸಿ 15 ಹುದ್ದೆಗಳಿಗೆ ಕಡ್ಡಾತ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮೇಲ್ವಿಚಾರಕರನ್ನು ಮತ್ತು ಸ್ಥಳೀಯ ನಿರೀಕ್ಷಣಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಮಾರ್ಗಾಧಿಕಾರಿಗಳು ಮತ್ತು ವೀಕ್ಷಕರನ್ನು ನೇಮಿಸಲಾಗಿದೆ ಎಂದು ತಿಳಿಸಿದರು.

ಪರೀಕ್ಷೆಗಳನ್ನು ಬರೆಯುವ ಅಭ್ಯರ್ಥಿಗಳಲ್ಲಿ ಕೋವಿಡ್ ಲಕ್ಷಣಗಳು ಕಂಡುಬಂದಲ್ಲಿ ವೈದ್ಯಕೀಯ ತಪಾಸಣೆ ಮಾಡಿಸಬೇಕು ಮತ್ತು ಸೂಕ್ತ ವ್ಯವಸ್ಥೆ ಮಾಡಿಸಬೇಕು, ಕಡ್ಡಾಯವಾಗಿ ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯ ಹಾಗೂ ಗಾಳಿ ಬೆಳಕಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ನೊಡಿಕೊಳ್ಳುವಂತೆ ತಿಳಿಸಿದರು.

ಪರೀಕ್ಷೆಗಳನ್ನು ನಿಯಮಾನುಸಾರವಾಗಿ ಯಾವುದೇ ಅಕ್ರಮಗಳಾಗದಂತೆ ನಡೆಸಬೇಕು ಮತ್ತು ಪರೀಕ್ಷಾ ಪಾವಿತ್ರ್ಯತೆಗೆ ಧಕ್ಕೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯ ಹಾಗೂ ಸ್ವಚ್ಛತೆ ಸೇರಿದಂತೆ ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಒದಗಿಸಬೇಕು ಎಂದು ಸೂಚನೆ ನೀಡಿದರು.

ಪರೀಕ್ಷಾ ಕೇಂದ್ರದ ಸುತ್ತಲೂ ಸೂಕ್ತ ಪೊಲೀಸ್ ಬಂದೋಬಸ್ತ್ ಏರ್ಪಡಿಸಿ ಭದ್ರತೆ ಒದಗಿಸಬೇಕು, ಪರೀಕ್ಷಾ ಕೇಂದ್ರದ ಒಳಗೆ ಕಡ್ಡಾಯವಾಗಿ ಸಿಸಿ ಕ್ಯಾಮರಾಗಳನ್ನು ಅಳವಡಿಸಬೇಕು, ಪರೀಕ್ಷಾ ಕೇಂದ್ರದ ಒಳಗೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ಕಡ್ಡಾಯವಾಗಿ ನಿಷೇಧಿಸಬೇಕು ಎಂದು ತಿಳಿಸಿದರು.

ಪರೀಕ್ಷಾ ಕೇಂದ್ರಗಳಿಗೆ ನೇಮಕಗೊಂಡ ಮೇಲ್ವಿಚಾರಕರು, ಸ್ಥಳೀಯ ನಿರೀಕ್ಷಣಾಧಿಕಾರಿಗಳು, ಮಾರ್ಗಾಧಿಕಾರಿಗಳು ಹಾಗೂ ವೀಕ್ಷಕರು ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಹಾಗೂ ನಿಯಮಾನುಸಾರವಾಗಿ ನಡೆಸುವಲ್ಲಿ ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಡಿ ಬಡಿಗೇರ, ಡಯಟ್‌ನ ಹಿರಿಯ ಉಪನ್ಯಾಸಕರಾದ ಮಲ್ಲಿಕಾರ್ಜುನ, ಶಿವಮ್ಮ, ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು, ಸ್ಥಾನಿಕ ಜಾಗೃತದಳದ ಅಧಿಕಾರಿಗಳು, ಮೇಲ್ವಿಚಾರಕರು, ಮಾರ್ಗಾಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



/freshiesicecreams

Pure delight in every bite. Savour the freshness of real fruit!

freshies
fruit icecreams

Visit us today!
#9, ISR Road, Beside KLS Hospital, Near Amedkar Circle, Hospete
Mob: 7036030603

Locate us:


**ಮೈಕ್ರೋ ನ್ಯೂಸ್**

## ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಸ್ಥಳ ಬದಲಾವಣೆ

**ಹಂಪಿ ಟೈಮ್ಸ್ ಬಳ್ಳಾರಿ**

ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಈ ಹಿಂದೆ ನಿಗಧಿಪಡಿಸಿದ್ದ ಮುನಿಸಿಪಲ್ ಕಾಲೇಜು ಮೈದಾನ ಸ್ಥಳವನ್ನು ರದ್ದುಗೊಳಿಸಿ, ಪ್ರಸ್ತುತ ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ನಗರದ ವಾಲ್ಮೀಕಿ ಭವನದಲ್ಲಿ ಆಯೋಜಿಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಗ್ರೇಸಿ ಅವರು ತಿಳಿಸಿದ್ದಾರೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ತಿಳಿಸಿದ್ದಾರೆ.


# ಮುನ್ನೆಚ್ಚರಿಕೆ ಲಸಿಕೆ ಪಡೆಯಿರಿ

## 18 ಮತ್ತು 60 ವರ್ಷ ಮೇಲ್ಪಟ್ಟವರು, ಕಡಿಮೆ ರೋಗ ನಿರೋಧಕ ಶಕ್ತಿ ಉಳ್ಳವರಿಗೆ ಲಸಿಕೆ

**ಹಂಪಿ ಟೈಮ್ಸ್ ಕೊಪ್ಪಳ**

ಕೋವಿಶಿಲ್ಡ್ ಅಥವಾ ಕೋವ್ಯಾಕ್ಸಿನ್ ಲಸಿಕೆಯ 2 ಡೋಸ್ ಲಸಿಕೆ ಪಡೆದು 06 ತಿಂಗಳುಗಳು ಅಥವಾ 26 ವಾರಗಳನ್ನು ಪೂರೈಸಿದ 18 ವರ್ಷ ಮೇಲ್ಪಟ್ಟವರು ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣಕ್ಕೆ ಬಾಕಿ ಇರುವ ಫಲಾನುಭವಿಗಳು ಕಾರ್ಬೋರ್‌ವ್ಯಾಕ್ಸ್ ಲಸಿಕೆಯನ್ನು ಪಡೆಯುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಎಚ್. ಅವರು ತಿಳಿಸಿದ್ದಾರೆ.

ಈಗಾಗಲೇ ಕೊಪ್ಪಳ ಜಿಲ್ಲೆಯಲ್ಲಿ ಕೋವಿಡ್–19 ಲಸಿಕಾಕರಣವನ್ನುರಾಜ್ಯಸರ್ಕಾರದಮಾರ್ಗಸೂಚಿಯಂತೆ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಇನ್ನೂ ಕೋವಿಡ್–19 ಲಸಿಕೆಯ ಮುನ್ನೆಚ್ಚರಿಕೆ ಡೋಸ್ ಪಡೆಯದೆ ಉಳಿದಿರುವ 60 ವರ್ಷ ಮೇಲ್ಪಟ್ಟವರು, ಕಡಿಮೆ ರೋಗ ನಿರೋಧಕ ಶಕ್ತಿ ಉಳ್ಳವರು ಮತ್ತು ಈ




ಹಿಂದೆ ಕೋವಿಡ್–19 ಲಸಿಕೆಯನ್ನು ಪಡೆಯದೆ ಇರುವ ಆರೋಗ್ಯ ಕಾರ್ಯಕರ್ತೆಯರು ಕೋವಿಡ್–19 ಸೋಂಕಿಗೆ ತುತ್ತಾಗುವ ಹೆಚ್ಚಿನ ಅಪಾಯದಂಚಿನಲ್ಲಿರುತ್ತಾರೆ. ಈ ಗುಂಪಿನ ಫಲಾನುಭವಿಗಳನ್ನು ಆದ್ಯತೆ ಮೇರೆಗೆ ರಕ್ಷಿಸಬೇಕಾಗಿದ್ದು, ಕೊಪ್ಪಳ ಜಿಲ್ಲೆಗೆ 520 ಡೋಸ್ ಕಾರ್ಬೋರ್‌ವ್ಯಾಕ್ಸ್ ಕೋವಿಡ್–19 ಲಸಿಕೆ ಸರಬರಾಜಾಗಿರುತ್ತವೆ. ಕಾರ್ಬೋರ್‌ವ್ಯಾಕ್ಸ್ ಕೋವಿಡ್–19 ಲಸಿಕೆಯನ್ನು ವಿಜಾತಿ (ಹೆಟೆರೊಲಾಗಸ್) ಮುನ್ನೆಚ್ಚರಿಕೆ ಡೋಸ್ ಆಗಿ ನೀಡಬಹುದಾಗಿರುತ್ತದೆ.

ಆದ್ದರಿಂದ ಕಾರ್ಬೋರ್‌ವ್ಯಾಕ್ಸ್ ಲಸಿಕೆಯು ಜಿಲ್ಲಾ ಆಸ್ಪತ್ರೆ ಕೊಪ್ಪಳ ಮತ್ತು ಕೊಪ್ಪಳ ಜಿಲ್ಲೆಯ ಎಲ್ಲಾ ತಾಲೂಕಾ ಆಸ್ಪತ್ರೆಗಳಲ್ಲಿ ಲಭ್ಯವಿದ್ದು, ಕೋವಿಶಿಲ್ಡ್ ಅಥವಾ ಕೋವ್ಯಾಕ್ಸಿನ್ ಲಸಿಕೆಯ 2 ಡೋಸ್ ಲಸಿಕೆ ಪಡೆದು 06 ತಿಂಗಳುಗಳು ಅಥವಾ 26 ವಾರಗಳನ್ನು ಪೂರೈಸಿದ 18 ವರ್ಷ ಮೇಲ್ಪಟ್ಟವರು ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣಕ್ಕೆ ಬಾಕಿ ಇರುವ ಫಲನುಭವಿಗಳು ಕಾರ್ಬೋರ್‌ವ್ಯಾಕ್ಸ್ ಲಸಿಕೆಯನ್ನು ಪಡೆಯಬಹುದಾಗಿರುತ್ತದೆ ಎಂದು ಡಿಎಚ್‌ಒ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ ಮಹಾನಗರ ಪಾಲಿಕೆ: ಮುಂಗಡ ಆಯ–ವ್ಯಯ ಪತ್ರದ ತಯಾರಿಕೆಯ ಸಾರ್ವಜನಿಕ ಸಮಾಲೋಚನಾ ಸಭೆ ಜ.12 ರಂದು

**ಹಂಪಿ ಟೈಮ್ಸ್ ಬಳ್ಳಾರಿ**

ಬಳ್ಳಾರಿ ಮಹಾನಗರ ಪಾಲಿಕೆಯ 2024–2025ನೇ ಸಾಲಿನ ಮುಂಗಡ ಆಯ–ವ್ಯಯ ಪತ್ರದ ತಯಾರಿಕೆಯ ಕುರಿತು ಉಪ ಮಹಾಪೌರರು, ಪಾಲಿಕೆ ಆಯುಕ್ತರ ಅಧ್ಯಕ್ಷತೆಯಲ್ಲಿ ಜ.12 ರಂದು ಮಧ್ಯಾಹ್ನ 03.30 ಗಂಟೆಗೆ ಪಾಲಿಕೆಯ ಶ್ರೀ ಕೃಷ್ಣದೇವರಾಯ ಕೌನ್ಸಿಲ್ ಸಭಾಂಗಣದಲ್ಲಿ ಸಾರ್ವಜನಿಕ ಸಮಾಲೋಚನಾ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ಜಿ.ಖಲೀಲ್‌ಸಾಬ್ ಅವರು ತಿಳಿಸಿದ್ದಾರೆ.

ನಾಗರಿಕರು, ಸಂಪನ್ಮೂಲ ವ್ಯಕ್ತಿಗಳು, ನೋಂದಾಯಿತ ವಸತಿ ಕ್ಷೇಮಾಭಿವೃದ್ಧಿ ಸಂಘಗಳು, ನೋಂದಾಯಿತ ಸರ್ಕಾರೇತರ ಸಂಘ–ಸಂಸ್ಥೆಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘ/ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿ, ನಗರದ ಸರ್ವತೋಮುಖ ಅಭಿವೃದ್ಧಿ ಕುರಿತಂತೆ ತಮ್ಮ ಅಭಿಪ್ರಾಯ, ಸಲಹೆ–ಸೂಚನೆ ನೀಡಬಹುದು.

ಸಭೆಯು ಸಾಮಾನ್ಯ ಸಾರ್ವಜನಿಕ ಕುಂದು ಕೊರತೆ ಸಭೆಯಾಗಿರುವುದಿಲ್ಲ, ಬದಲಾಗಿ 2024–25ನೇ ಸಾಲಿಗೆ ನಗರದ ಅಭಿವೃದ್ಧಿಗೆ ಪೂರಕವಾಗಿ ಆಯ–ವ್ಯಯದಲ್ಲಿ ಅಳವಡಿಸಿ ಕೊಳ್ಳಬೇಕಾದ ಕಾರ್ಯ ಸೂಚಿಯನ್ನು ತಯಾರಿಸುವ ಸಭೆಯಾಗಿದ್ದು, ಸಾರ್ವಜನಿಕರು ನವೀನ, ಅಭಿವೃದ್ಧಿ ಮಾದರಿ, ಸಂಪನ್ಮೂಲ ಕ್ರೋಢಿಕರಣ, ಅಳವಡಿಸಿಕೊಳ್ಳುವ ಬಗ್ಗೆ ಸಲಹೆ ಸೂಚನೆ ಮಾತ್ರ ನೀಡಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜಯ್ ಪ್ರಕಾಶ್, ರಘು ದೀಕ್ಷಿತ್ ಅವರ ರಸಮಂಜರಿ ಕಾರ್ಯಕ್ರಮ ರದ್ದು

**ಹಂಪಿ ಟೈಮ್ಸ್ ಬಳ್ಳಾರಿ**

ನಗರದಲ್ಲಿ ಜ.06 ಮತ್ತು 07 ರಂದು ನಡೆಯುವರಾಜ್ಯಮಟ್ಟದಯುವಜನೋತ್ಸವ ಕಾರ್ಯಕ್ರಮದಲ್ಲಿ ಖ್ಯಾತ ಸಂಗೀತ ಗಾಯಕರಾದ ವಿಜಯ್ ಪ್ರಕಾಶ್, ರಘು ದೀಕ್ಷಿತ್ ಅವರ ರಸಮಂಜರಿ ಕಾರ್ಯಕ್ರಮವು ಅನಿವಾರ್ಯ ಕಾರಣಗಳಿಂದ ರದ್ದುಗೊಂಡಿದೆ. ಉಳಿದಂತೆ, ಇನ್ನಿತರೆ ಸಾಂಸ್ಕೃತಿಕ ಮತ್ತು ಮನೋರಂಜನೆ ಕಾರ್ಯಕ್ರಮಗಳು ನಡೆಯಲಿವೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಶಾಸ್ತ್ರೀಯ ಸಂಗೀತ, ಶಾಸ್ತ್ರೀಯ ನೃತ್ಯ, ಶಾಸ್ತ್ರೀಯ ವಾದ್ಯಗಳು, ಜನಪದ ನೃತ್ಯ, ಜನಪದ ಗೀತೆಯಂತಹ ಯುವ ಪ್ರತಿಭೆ ಅನಾವರಣಗೊಳ್ಳಲಿವೆ. ಜೊತೆಗೆ ಭಾಷಣ ಸ್ಪರ್ಧೆ, ಕಥೆ ಬರೆಯುವ ಸ್ಪರ್ಧೆ, ಛಾಯಾಚಿತ್ರಗ್ರಹಣ, ಪೋಸ್ಟರ್ ತಯಾರಿಕೆಗ ಳಂತಹ ಸೃಜನಶೀಲ ಕಾರ್ಯಕ್ರಮ ಇರಲಿವೆ. ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಅವರು ತಿಳಿಸಿದ್ದಾರೆ.


HAMPI TIMES VIJAYANAGARA

ಹಂಪಿ ಟೈಮ್ಸ್ 2024
ವಿಜಯನಗರದ ಹೆಮ್ಮೆ

JANUARY

| S | M | T | W | T | F | S |
|---|---|---|---|---|---|---|
| | 1 | 2 | 3 | 4 | 5 | 6 |
| 7 | 8 | 9 | 10 | 11 | 12 | 13 |
| 14 | 15 | 16 | 17 | 18 | 19 | 20 |
| 21 | 22 | 23 | 24 | 25 | 26 | 27 |
| 28 | 29 | 30 | 31 | | | |

FEBRUARY

| S | M | T | W | T | F | S |
|---|---|---|---|---|---|---|
| | | | | 1 | 2 | 3 |
| 4 | 5 | 6 | 7 | 8 | 9 | 10 |
| 11 | 12 | 13 | 14 | 15 | 16 | 17 |
| 18 | 19 | 20 | 21 | 22 | 23 | 24 |
| 25 | 26 | 27 | 28 | 29 | | |

MARCH

| S | M | T | W | T | F | S |
|---|---|---|---|---|---|---|
| | | | | | 1 | 2 |
| 3 | 4 | 5 | 6 | 7 | 8 | 9 |
| 10 | 11 | 12 | 13 | 14 | 15 | 16 |
| 17 | 18 | 19 | 20 | 21 | 22 | 23 |
| 24 | 25 | 26 | 27 | 28 | 29 | 30 |
| 31 | | | | | | |

APRIL

| S | M | T | W | T | F | S |
|---|---|---|---|---|---|---|
| | 1 | 2 | 3 | 4 | 5 | 6 |
| 7 | 8 | 9 | 10 | 11 | 12 | 13 |
| 14 | 15 | 16 | 17 | 18 | 19 | 20 |
| 21 | 22 | 23 | 24 | 25 | 26 | 27 |
| 28 | 29 | 30 | | | | |

MAY

| S | M | T | W | T | F | S |
|---|---|---|---|---|---|---|
| | | | 1 | 2 | 3 | 4 |
| 5 | 6 | 7 | 8 | 9 | 10 | 11 |
| 12 | 13 | 14 | 15 | 16 | 17 | 18 |
| 19 | 20 | 21 | 22 | 23 | 24 | 25 |
| 26 | 27 | 28 | 29 | 30 | 31 | |

JUNE

| S | M | T | W | T | F | S |
|---|---|---|---|---|---|---|
| | | | | | | 1 |
| 2 | 3 | 4 | 5 | 6 | 7 | 8 |
| 9 | 10 | 11 | 12 | 13 | 14 | 15 |
| 16 | 17 | 18 | 19 | 20 | 21 | 22 |
| 23 | 24 | 25 | 26 | 27 | 28 | 29 |
| 30 | | | | | | |

JULY

| S | M | T | W | T | F | S |
|---|---|---|---|---|---|---|
| | 1 | 2 | 3 | 4 | 5 | 6 |
| 7 | 8 | 9 | 10 | 11 | 12 | 13 |
| 14 | 15 | 16 | 17 | 18 | 19 | 20 |
| 21 | 22 | 23 | 24 | 25 | 26 | 27 |
| 28 | 29 | 30 | 31 | | | |

AUGUST

| S | M | T | W | T | F | S |
|---|---|---|---|---|---|---|
| | | | | 1 | 2 | 3 |
| 4 | 5 | 6 | 7 | 8 | 9 | 10 |
| 11 | 12 | 13 | 14 | 15 | 16 | 17 |
| 18 | 19 | 20 | 21 | 22 | 23 | 24 |
| 25 | 26 | 27 | 28 | 29 | 30 | 31 |

SEPTEMBER

| S | M | T | W | T | F | S |
|---|---|---|---|---|---|---|
| 1 | 2 | 3 | 4 | 5 | 6 | 7 |
| 8 | 9 | 10 | 11 | 12 | 13 | 14 |
| 15 | 16 | 17 | 18 | 19 | 20 | 21 |
| 22 | 23 | 24 | 25 | 26 | 27 | 28 |
| 29 | 30 | | | | | |

OCTOBER

| S | M | T | W | T | F | S |
|---|---|---|---|---|---|---|
| | | 1 | 2 | 3 | 4 | 5 |
| 6 | 7 | 8 | 9 | 10 | 11 | 12 |
| 13 | 14 | 15 | 16 | 17 | 18 | 19 |
| 20 | 21 | 22 | 23 | 24 | 25 | 26 |
| 27 | 28 | 29 | 30 | 31 | | |

NOVEMBER

| S | M | T | W | T | F | S |
|---|---|---|---|---|---|---|
| | | | | | 1 | 2 |
| 3 | 4 | 5 | 6 | 7 | 8 | 9 |
| 10 | 11 | 12 | 13 | 14 | 15 | 16 |
| 17 | 18 | 19 | 20 | 21 | 22 | 23 |
| 24 | 25 | 26 | 27 | 28 | 29 | 30 |

DECEMBER

| S | M | T | W | T | F | S |
|---|---|---|---|---|---|---|
| 1 | 2 | 3 | 4 | 5 | 6 | 7 |
| 8 | 9 | 10 | 11 | 12 | 13 | 14 |
| 15 | 16 | 17 | 18 | 19 | 20 | 21 |
| 22 | 23 | 24 | 25 | 26 | 27 | 28 |
| 29 | 30 | 31 | | | | |



ಶ್ರೀ ಹಂಪಿ ವಿರೂಪಾಕ್ಷೇಶ್ವರ ಸ್ವಾಮಿ

Call us for : News, Advertisements, Events Coverage

www.hampitimes.com

ಹೊಸ ವರುಷ ಹರುಷ ತರಲಿ

Office : # Bamboo Bazaar, Valmiki Circle, Hosapete-583201, Vijayanagara Dist . Karnataka
M:9448633038, E-mail: hampitimes@gmail.com | epaper.hampitimes.com


Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA